# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 74 | WEDNESDAY 27-05-2026 | PRGI No : KNKAN/26/A0962 | Pages:4 | Rs.2.00 | M: 9742418836

## ರಾಜ್ಯ ಸರ್ಕಾರದ 'ದ್ವೇಷ ಭಾಷಣ' ಮಸೂದೆಗೆ ಅಮಿತ್ ಶಾ ಅಡ್ಡಗಾಲು; ಅಸ್ತಿತ್ವದಲ್ಲಿರುವ ಕಾನೂನೇ ಸಾಕು: ಕೇಂದ್ರ



ಬೆಂಗಳೂರು: ರಾಜ್ಯದಲ್ಲಿ "ದ್ವೇಷ ಭಾಷಣ"ವನ್ನು ನಿಗ್ರಹಿಸುವ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳು(ತಡೆಗಟ್ಟುವಿಕೆ) ಮಸೂದೆ, 2025 ಅನ್ನು ರಾಜ್ಯ ಸರ್ಕಾರ ಈಗಾಗಲೇ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನಲ್ಲಿ ಅಂಗೀಕರಿಸಿ ಅನುಮೋದನೆಗಾಗಿ ರಾಜ್ಯಪಾಲರಿಗೆ ಕಳುಹಿಸಿದೆ. ಆದರೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಇದಕ್ಕೆ ಇನ್ನೂ ಸಹಿ ಹಾಕಿಲ್ಲ.

ರಾಜ್ಯಪಾಲರು ಥಾವರ್‌ಚಂದ್ ಗೆಹ್ಲೋಟ್ ಅವರು ಅನುಮೋದನೆ ನೀಡಲು ನಿರಾಕರಿಸಿದ ನಂತರ, ಕರ್ನಾಟಕ ಸರ್ಕಾರವು ಫೆಬ್ರವರಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಒಪ್ಪಿಗೆಗಾಗಿ ಮಸೂದೆಯನ್ನು ಗೃಹ ಸಚಿವಾಲಯಕ್ಕೆ ಕಳುಹಿಸಿದೆ.

ಇದೀಗ ರಾಜ್ಯ ಸರ್ಕಾರದ 'ದ್ವೇಷ ಭಾಷಣ' ಮಸೂದೆಗೆ ಕೇಂದ್ರ ಸರ್ಕಾರ ಅಡ್ಡಗಾಲು ಹಾಕಿದ್ದು, ಈ ಹಂತದಲ್ಲಿ ಮಸೂದೆ ಅಗತ್ಯವಿಲ್ಲ ಮತ್ತು ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟು ಈ ಸಮಸ್ಯೆಯನ್ನು ಪರಿಹರಿಸಲು ಸಮರ್ಪಕವಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ಹೇಳಿದೆ.

ಈ ಸಂಬಂಧ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿರುವ ಕೇಂದ್ರ ಗೃಹ ಸಚಿವಾಲಯ, ಇಂಥದ್ದೊಂದು ಮಸೂದೆಯ ಅಗತ್ಯ ಇದೆಯೇ? ಎಂದು ಪ್ರಶ್ನಿಸಿದೆ.

ಬಿಜೆಪಿ ಮತ್ತು ಜೆಡಿ(ಎಸ್)ನ ತೀವ್ರ ವಿರೋಧದ ಹೊರತಾಗಿಯೂ, ಕಳೆದ ವರ್ಷ ಡಿಸೆಂಬರ್ 19 ರಂದು ಮುಕ್ತಾಯಗೊಂಡ ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ರಾಜ್ಯ ವಿಧಾನಮಂಡಲದ ಎರಡೂ ಸದನಗಳು ಈ ಮಸೂದೆಯನ್ನು ಅಂಗೀಕರಿಸಲಾಗಿದೆ.

"ಈ ವಿಷಯವನ್ನು ಸಿಎಸ್ ವಿಭಾಗದಲ್ಲಿ ಪರಿಶೀಲಿಸಲಾಗಿದೆ. ಈ ನಿಟ್ಟಿನಲ್ಲಿ, ಪರಿಹರಿಸಬೇಕಾದ ಸಮಸ್ಯೆಗಳು ಈಗಾಗಲೇ ಭಾರತೀಯ ನ್ಯಾಯ ಸಂಹಿತಾ, 2023 ಮತ್ತು ಇತರ ಚಾಲ್ತಿಯಲ್ಲಿರುವ ಕಾನೂನುಗಳ ಅಡಿಯಲ್ಲಿ ಗಣನೀಯವಾಗಿ ಸೇರಿಕೊಂಡಿವೆ. ಹೀಗಿರುವಾಗ ರಾಜ್ಯ ಸರ್ಕಾರವು ಪ್ರತ್ಯೇಕ ಕಾನೂನು ಜಾರಿಗೆ ತರುವುದರಿಂದ ನಕಲು ಮತ್ತು ಏಕರೂಪತೆಯ ಕೊರತೆ ಉಂಟಾಗಬಹುದು" ಎಂದು ಗೃಹ ಸಚಿವಾಲಯ (ಸಿಎಸ್ ವಿಭಾಗ) ಪತ್ರದಲ್ಲಿ ತಿಳಿಸಿದೆ.

"ಮೇಲಿನದನ್ನು ಗಮನದಲ್ಲಿಟ್ಟುಕೊಂಡು, ಈ ಹಂತದಲ್ಲಿ ಪ್ರಸ್ತಾವಿತ ಮಸೂದೆಯು ಅಗತ್ಯವಿಲ್ಲದಿರಬಹುದು ಮತ್ತು ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟು ಸಮಸ್ಯೆಗಳನ್ನು ಪರಿಹರಿಸಲು ಸಾಕಾಗುತ್ತದೆ" ಎಂದು ಕೇಂದ್ರ ಹೇಳಿದೆ.

## ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ: ರಾಜಕೀಯ ಮಾಡ್ಬೇಡಿ, ವ್ಯಾಟ್ ಕಡಿಮೆ ಮಾಡಿ; ಸಿಎಂ ಸಿದ್ದರಾಮಯ್ಯಗೆ ಆಶೋಕ್ ಒತ್ತಾಯ!

ಬೆಂಗಳೂರು: ಇಂಧನ ಬೆಲೆ ಏರಿಕೆಯನ್ನು ಕಾಂಗ್ರೆಸ್ ನಾಯಕರು ರಾಜಕೀಯಗೊಳಿಸುತ್ತಿದ್ದಾರೆ ಎಂದು ವಿರೋಧ ಪಕ್ಷ ಬಿಜೆಪಿ ಆರೋಪಿಸಿದೆ. ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಮೌಲ್ಯವರ್ಧಿತ ತೆರಿಗೆ (ವ್ಯಾಟ್) ಕಡಿಮೆ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿದೆ.

ರಾಜ್ಯ ಸರ್ಕಾರ ವಿಧಿಸಿರುವ ಹೆಚ್ಚಿನ ವ್ಯಾಟ್‌ನಿಂದಾಗಿ ಕರ್ನಾಟಕದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು ದೆಹಲಿ ಸೇರಿದಂತೆ ಇತರ ಹಲವು ರಾಜ್ಯಗಳಲ್ಲಿನ ಇಂಧನ ಬೆಲೆಗಳಿಗಿಂತ ಹೆಚ್ಚಾಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅಶೋಕ್, ಕಾಂಗ್ರೆಸ್ ಸರ್ಕಾರ ಪೆಟ್ರೋಲ್ ಬೆಲೆ ಏರಿಕೆಯಿಂದ ಹೆಚ್ಚುವರಿ ಆದಾಯ ಗಳಿಸುತ್ತಿದೆ. ವ್ಯಾಟ್ ಕಡಿಮೆ ಮಾಡುವ ಬದಲು ಅದು ಕೇಂದ್ರದ ಮೇಲೆ ಆರೋಪ ಮಾಡುತ್ತಿದೆ ಎಂದು ಅವರು ಟೀಕಿಸಿದರು. ಬೆಲೆ ಏರಿಕೆಯೂ ಕೇಂದ್ರಕ್ಕೆ ಯಾವುದೇ ಆದಾಯ ತರುವುದಿಲ್ಲ ಮತ್ತು ರಾಜ್ಯ ಸರ್ಕಾರ ವಾರ್ಷಿಕವಾಗಿ 6,000 ಕೋಟಿ ರೂ.ಗಳನ್ನು ಹೆಚ್ಚುವರಿ ಆದಾಯ



ಪಡೆಯುತ್ತಿದೆ. ಇಂಧನ ಬೆಲೆ ಏರಿಕೆಯಿಂದ ಗಳಿಸಿದ ಆದಾಯವನ್ನು ಗ್ಯಾರಂಟಿ ಯೋಜನೆಗಳಿಗಾಗಿ ಬಳಸಿಕೊಳ್ಳುತ್ತಿದೆ ಎಂದು ಕಿಡಿಕಾರಿದರು.

ಸರ್ಕಾರವು ನಿಜವಾಗಿಯೂ ಜನರಿಗೆ ಸಹಾಯ ಮಾಡಲು ಬಯಸಿದರೆ, ಅದು ತನ್ನ ತೆರಿಗೆಗಳನ್ನು ಕಡಿಮೆ ಮಾಡಬೇಕು. ಇಲ್ಲದಿದ್ದರೆ, ಅದು ಗಳಿಸುತ್ತಿರುವ ಹೆಚ್ಚುವರಿ ಆದಾಯವನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಬೇಕು. ಬೆಲೆ ಏರಿಕೆಯ ವಿರುದ್ಧ ಕಾಂಗ್ರೆಸ್ ಮಾಡುತ್ತಿರುವ ಪ್ರತಿಭಟನೆ ಜನರನ್ನು ವಂಚಿಸುವಂತಹದ್ದು, ಯುದ್ಧದ ಕಾರಣದಿಂದಾಗಿ ಹಲವಾರು ದೇಶಗಳು ಪೆಟ್ರೋಲ್ ಬಳಕೆಯನ್ನು ಕಡಿಮೆ ಮಾಡಲು ನಿರ್ಬಂಧ ವಿಧಿಸಿದ್ದರೂ, ಭಾರತವು ಅಂತಹ ಯಾವುದೇ ನಿರ್ಬಂಧಗಳನ್ನು ವಿಧಿಸಿಲ್ಲ ಎಂದು ಬಿಜೆಪಿ ನಾಯಕ ಹೇಳಿದರು.

ಕಾಂಗ್ರೆಸ್‌ನಲ್ಲಿ ಸಿಎಂ ಹುದ್ದೆಗಾಗಿ ಆಂತರಿಕ ಸಂಘರ್ಷ ಕುರಿತು ಪ್ರತಿಕ್ರಿಯಿಸಿದ ಅಶೋಕ್, ಮುಖ್ಯಮಂತ್ರಿ ಹುದ್ದೆಗೆ ಅಧಿಕಾರಕ್ಕಾಗಿ ಹೋರಾಟ ನಡೆಯುತ್ತಿದೆ. ಡಿಸಿಎಂ ಡಿ.ಕೆ. ಶಿವಕುಮಾರ್ ತಮ್ಮ ಭವಿಷ್ಯವನ್ನು ಭದ್ರಪಡಿಸಿಕೊಳ್ಳುತ್ತಿದ್ದಾರೆಯೇ ಅಥವಾ ಬೇರೆ ಪಕ್ಷಕ್ಕೆ ಸೇರಲು ಯೋಜಿಸುತ್ತಿದ್ದಾರೆಯೇ ಎಂಬುದು ಸ್ಪಷ್ಟವಾಗಿಲ್ಲ. ಸಿದ್ದರಾಮಯ್ಯ ತಮ್ಮ ಸಚಿವರ ತಂಡದೊಂದಿಗೆ ನವದೆಹಲಿಗೆ ಹೋಗುತ್ತಿದ್ದಾರೆ ಮತ್ತು ಅವರು ಸಿಎಂ ಕುರ್ಚಿಯನ್ನು ಖಾಲಿ ಮಾಡುವುದಿಲ್ಲ ಎಂದು ಅಶೋಕ ಹೇಳಿದರು.

ಕೆಲವು ಮುಸ್ಲಿಂ ಮತಾಂಧರು ಭಟ್ಕಳದಲ್ಲಿ ಹಿಂದೂಗಳು ನಿರ್ಮಿಸಿದ್ದ ವೇದಿಕೆಯನ್ನು (ಮೂರಿನಕಟ್ಟೆ) ಕೆಡವಿದ್ದಾರೆ. ಆದರೆ ಪೊಲೀಸರು ಅವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ. ಕಲಬುರ್ಗಿ ಜಿಲ್ಲೆಯ ಆಳಂದದಲ್ಲಿ ಕೋಮು ಹಿಂಸಾಚಾರದಲ್ಲಿ ಭಾಗಿಯಾಗಿರುವವರ ವಿರುದ್ಧದ ಪ್ರಕರಣಗಳನ್ನು ರಾಜ್ಯ ಸರ್ಕಾರ ಹಿಂತೆಗೆದುಕೊಂಡ ನಂತರ ಭಟ್ಕಳದಲ್ಲಿ ಈ ಘಟನೆ ನಡೆದಿದೆ ಮತ್ತು ಇದೆಲ್ಲವೂ ಮತಬ್ಯಾಂಕ್ ರಾಜಕೀಯದಿಂದಾಗಿ ನಡೆಯುತ್ತಿದೆ.ಪೊಲೀಸರ ಮೇಲೆ ದಾಳಿ ಮಾಡಿದವರ ವಿರುದ್ಧ ಗೂಂಡಾ ಕಾಯ್ದೆಯಡಿ ಪ್ರಕರಣ ದಾಖಲಿಸಬೇಕು ಮತ್ತು ಗೃಹ ಸಚಿವ ಡಾ. ಜಿ. ಪರಮೇಶ್ವರ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಅವರು ಹೇಳಿದರು.

'ಕಾಕ್ರೋಚ್ ಜನತಾ ಪಾರ್ಟಿ' ಮೂಲಕ ದೇಶ ವಿರೋಧಿ ಅಂಶಗಳು ದೇಶವನ್ನು ಒಡೆಯಲು ಪ್ರಯತ್ನಿಸುತ್ತಿವೆ."ಇದರಲ್ಲಿ ಪಾಕಿಸ್ತಾನಿಗಳು ಮತ್ತು ಬಾಂಗ್ಲಾದೇಶಿಯರು ಕೂಡ ಭಾಗಿಯಾಗಿದ್ದಾರೆ. ಜನರು ಇಂತಹ ಟೂಲ್‌ಕಿಟ್‌ಗಳನ್ನು ನಂಬಬಾರದು. ಕಾಂಗ್ರೆಸ್ ಜಿರಳೆ ಪಕ್ಷವಾಗಿ ಮಾರ್ಪಟ್ಟಿದೆ. ರಾಹುಲ್ ಗಾಂಧಿ ಮತ್ತು ಅರವಿಂದ್ ಕೇಜ್ರಿವಾಲ್ ಜಿರಳೆ ಜನತಾ ಪಕ್ಷದ ಹಿಂದೆ ಇದ್ದಾರೆ" ಎಂದು ಅವರು ಆರೋಪಿಸಿದರು.

## ಶಿಕ್ಷಕರಿಗೆ ಸಸಿ ನೀಡಿ ಪರಿಸರ ಜಾಗೃತಿ ಮೂಡಿಸಿದ ಹಳೆ ವಿದ್ಯಾರ್ಥಿಗಳು

### ದೇಶದ ಸಾಂಸ್ಕೃತಿಕ ಶ್ರೀಮಂತಿಕೆಯಲ್ಲಿ ಗುರು ಶಿಷ್ಯ ಪರಂಪರೆ ಒಂದಾಗಿದೆ– ಪ್ರೊ. ಪಟಾಯಿತ



ಗೋಕಾಕ: ತಾಲೂಕಿನ ಶಿಂದಿಕುರಬೇಟ ಗ್ರಾಮದ ಶ್ರೀ ಸಿದ್ದರಾಮೇಶ್ವರ ಶಾಲೆಯ ವಿದ್ಯಾರ್ಥಿಗಳ ಗುರುವಂದನಾ ಕಾರ್ಯಕ್ರಮದಲ್ಲಿ ಶಿಕ್ಷಕರನ್ನು ಸನ್ಮಾನಿಸುತ್ತಿರುವುದು.

**ಬೆಳಗಾವಿ ವಾರ್ತೆ ಗೋಕಾಕ :** ನಮ್ಮ ದೇಶದ ಸಾಂಸ್ಕೃತಿಕ ಶ್ರೀಮಂತಿಕೆಯಲ್ಲಿ ಗುರು ಶಿಷ್ಯ ಪರಂಪರೆ ಒಂದು. ಅನುದಿನವು ಕಾಯಕ ಮಾಡುತ್ತಾ ನಮ್ಮ ಸುಂದರ ಬದುಕನ್ನು ರೂಪಿಸಿಕೊಳ್ಳಬೇಕು. ಗುರು ಶಿಷ್ಯರ ನಡುವೆ ಇರುವ ಸಂಬಂಧ ಭಾವನಾತ್ಮಕ ಸಂಬಂಧವಾಗಿದ್ದು ಜೊತೆಗೆ ಸ್ನೇಹಿತರಲ್ಲಿಯೂ ಅದೇ ಭಾವನಾತ್ಮಕ ಸಂಬಂಧವಿದೆ ಎಂದು ಗೋಕಾಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಲಕ್ಷ್ಮಣ ಪಟಾಯಿತ ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಶಿಂದಿಕುರಬೇಟ ಗ್ರಾಮದ ಶ್ರೀ ಸಿದ್ದರಾಮೇಶ್ವರ ಆದರ್ಶ ಕನ್ನಡ ಮಾಧ್ಯಮ ಹಿರಿಯ ಪ್ರಾಥಮಿಕ ಅನುದಾನಿತ ಶಾಲೆಯ ಸನ್ 1999–2000 ಸಾಲಿನ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಗುರು ವಂದನಾ ಕಾರ್ಯಕ್ರಮ ಹಾಗೂ ಸ್ನೇಹಿತರ ಪುನರ್ಮಿಲನ ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಮನುಷ್ಯ ಸಮಾಜದಲ್ಲಿ ಏನಾದರೂ ಸಾಧನೆ ಮಾಡಬೇಕಾದರೆ ಉತ್ತಮ ಚಾರಿತ್ರ್ಯ ಮುಖ್ಯವಾಗಿದೆ ಎಂದರಲ್ಲದೇ ಚಾರಿತ್ರ್ಯವೇ ಜೀವನದ ಕಿರೀಟ ವಾಗಿದೆ. ಪ್ರಾಥಮಿಕ ಶಾಲೆಯಲ್ಲಿ ವಿದ್ಯೆ ಕಲಿಸಿದ ಗುರುಗಳನ್ನು ಒಂದೇ ವೇದಿಕೆಯಲ್ಲಿ ಸೇರಿಸಿ ಅವರಿಗೆ ಸತ್ಕಾರದ ಜೊತೆಗೆ ಸಸಿ ನೀಡಿ ಪರಿಸರ ಜಾಗೃತಿ ಮೂಡಿಸಿದ ಹಳೆ ವಿದ್ಯಾರ್ಥಿಗಳ ಕಾರ್ಯ ಶ್ಲಾಘನೀಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಧಾನ ಗುರು ಎಂ.ಆರ್.ಕಡಕೋಳ ಮಾತನಾಡಿ ನಮ್ಮ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ಸೇವೆ ಮಾಡುತ್ತಾ ತಮ್ಮ ಉತ್ತಮ ಬದುಕು ಕಟ್ಟಿಕೊಂಡು ಜೀವನ ನಡೆಸುತ್ತಿರುವ ನಮಗೆ ತುಂಬಾ ಸಂತೋಷವಾಗಿದೆ ಎಂದರು.

ರಾಜ್ಯ ಮಟ್ಟದ ಪ್ರಶಸ್ತಿ ಪುರಸ್ಕೃತ ಶಿಕ್ಷಕಿ ಎಸ್.ಎಸ್.ದೊಡಮನಿ ಮಾತನಾಡಿ ನಮ್ಮ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳಿಗೆ ನಾವು ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ನೀಡಿದ್ದು ತಾವುಗಳು ಕೂಡ ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರವನ್ನು ನೀಡಿ ಅವರನ್ನು ಜೀವನದಲ್ಲಿ ಉಜ್ವಲ ಭವಿಷ್ಯ ಕಟ್ಟಿಕೊಳ್ಳಲು ಪ್ರೇರಣೆ ನೀಡಬೇಕೆಂದು ಕರೆ ನೀಡಿದರು. ವೇದಿಕೆ ಮೇಲೆ ಶಿಕ್ಷಕರಾದ ಎಸ್.ಆರ್.ತರಾಳ, ಎಸ್.ಎಲ್. ಅಂಬಿ, ಬಸವರಾಜ ಪೂಜೇರಿ, ಎಲ್. ಆರ್.ಭೋವಿ, ಟಿ.ಐ.ಕಟ್ಟಿಮನಿ, ಎಸ್.ಆರ್. ಅರಳಿಮಟ್ಟಿ, ಪಿ.ಎನ್. ಬಡಕುಂದ್ರಿ, ಆರ್.ಬಿ.ಕರೆಪ್ಪಗೋಳ, ವಿಠ್ಠಲ ಕರೋಶಿ ಸೇರಿದಂತೆ ಅನೇಕರು ಉಪಸ್ಥಿತ'ರಿದ್ದರು. ವಿದ್ಯಾರ್ಥಿಗಳು ತಮ್ಮ ಶಾಲೆಯ ದಿನಗಳನ್ನು ಸ್ಮರಿಸಿಕೊಂಡರು. ವಿದ್ಯೆ ಕಲಿಸಿದ ಶ್ರೀ ಸಿದ್ದರಾಮೇಶ್ವರ ಪ್ರಾಥಮಿಕ ಶಾಲೆಯ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಿ ದರು. ಸಂಗೀತಾ ಬಳಗಾರ ಸ್ವಾಗತಿಸಿ ದರು. ರಾಜೇಶ್ವರಿ ನಿಪ್ಪಾಣಿ ನಿರೂಪಿಸಿ ದರು. ನಾಗೇಶ್ ಬಂಬಲಾಡಿ ವಂದಿಸಿದರು.

## ಶಾಸಕ ರಾಜು ಕಾಗೆಯವರಿಗೆ ಕ್ಯಾಬಿನೆಟ್ ದರ್ಜೆ ಸಚಿವ ಸ್ಥಾನ ನೀಡಿ; ಸಿದ್ಧಪ್ಪಾ ಕನಾಳೆ ಆಗ್ರಹ



ಮೋಳೆ: ಮೋಳೆ ಗ್ರಾಮದಲ್ಲಿ ವಿವಿಧ ರಸ್ತೆ ಕಾಮಗಾರಿಗೆ ಸಿದ್ದಪ್ಪ ಕನಾಳೆ ಪೂಜೆ ನೆರವೇರಿಸುತ್ತಿರುವ ಚಿತ್ರ.

**ಬೆಳಗಾವಿ ವಾರ್ತೆ ಮೋಳೆ ;**–ಉತ್ತರ ಕರ್ನಾಟಕದ ಪ್ರಭಾವಿ ನಾಯಕ, ಐದು ಬಾರಿ ಶಾಸಕರಾಗಿ ಅಪಾರ ಅನುಭವ ಹೊಂದಿರುವ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಹಾಗೂ ಬಿಡಿಸಿಸಿ ಬ್ಯಾಂಕ ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಕಾಗವಾಡ ಶಾಸಕ ರಾಜು ಕಾಗೆಯವರಿಗೆ ಕ್ಯಾಬಿನೆಟ್ ದರ್ಜೆಯ ಸಚಿವ ಸ್ಥಾನ ಕೊಡಬೇಕು ಎಂದು ಹಿರಿಯ ಕಾಂಗ್ರೆಸ್ ಮುಖಂಡ ಸಿದ್ಧಪ್ಪಾ ಕನಾಳೆ ಮುಖ್ಯಮಂತ್ರಿ ಸಿದ್ಧರಾಮಯ್ಯನವರನ್ನು ಆಗ್ರಹಿಸಿದರು.

ಅವರು ಸೋಮವಾರ ಮೋಳೆ ಗ್ರಾಮದಲ್ಲಿ ವಿವಿಧ ರಸ್ತೆ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತಿದ್ದರು. ಶಾಸಕ ರಾಜು ಕಾಗೆ ಎಸ್.ಎಮ್.ಕೃಷ್ಣಾ, ಎನ್.ಧರ್ಮಸಿಂಗ, ಸಿದ್ಧರಾಮಯ್ಯನವರ ಮೊದಲ ಮತ್ತು ಈಗಿನ ಸರಕಾರಗಳ ಸಹಿತ ಇನ್ನೂ ಅನೇಕ ಮಹನೀಯರ ಸರಕಾರದಲ್ಲಿ ಶಾಸಕರಾಗಿ ಕಾರ್ಯನಿರ್ವಹಿಸಿದ ರಾಜು ಕಾಗೆ ಇವರಿಗೆ ಕ್ಯಾಬಿನೆಟ್ ದರ್ಜೆ ಸಚಿವ ಸ್ಥಾನ ಕೊಡಬೇಕು ಎಂದು ಆಗ್ರಹಿಸಿದರು.

ಮೋಳೆ ಕೃಷ್ಣಾ ಕಿತ್ತೂರ ಗ್ರಾಮದ ವರೆಗೆ, ಮೋಳೆ ಹುಲಗಬಾಳಿ ರಸ್ತೆ, ಆಜೂರ ಖಿಳೇಗಾಂವ ರಸ್ತೆಯಿಂದ ಧಡ್ಡಣ್ಣವರ ವಸತಿ ವರೆಗಿನ ಕಾಮಗಾರಿಗೆ, ಆಜೂರ ಶಿರೂರ ಗ್ರಾಮದ ವರೆಗೆ, ಆಜೂರ ಕೊಕಳೆ ವರೆಗಿನ ಒಂದು ಕೋಟಿ ರೂಗಳ ರಸ್ತೆ ಕಾಮಗಾರಿಗೆ ಭೂಮಿ ಪೂಜೆಯನ್ನು ಕಾಂಗ್ರೆಸ್ ಮುಖಂಡರು ನೆರವೇರಿಸಿದರು.

ಶಾಸಕ ರಾಜು ಕಾಗೆಯವರ ಆಪ್ತ ಸಹಾಯಕ ಕುಮಾರ ಪಾಟೀಲ, ಜಿ.ಪಂ ಅಧಿಕಾರಿ ವೀರಣ್ಣಾ ವಾಲಿ, ಸಹಾಯಕ ಇಂಜನೀಯರ ಮಡಿವಾಳಪ್ಪ ಪಾಟೀಲ, ಗುತ್ತಿಗೆದಾರರಾದ ಚಿದಾನಂದ ಹಣಮಾಪುರೆ, ಬಸವರಾಜ ನಾವಿ, ಸಚಿನ ಗೊಲಭಾವಿ, ಧುರೀಣರಾದ ವಿಶಾಲ ನಿಂಬಾಳ, ಅಶೋಕ ಹುಗ್ಗಿ,ವಿನೋದ ಕೋಳೇಕರ,ಹಣಮಂತ ಕಡಕೋಳ,ಬಾಳಾಸಾಹೇಬ ಯರಂಡೋಲಿ, ಸತೀಶ ಯರಂಡೋಲಿ, ಗಜಾನನ ಮಂಜೆ, ಧರ್ಮಾ ಕೊಳೇಕರ, ಗುರು ಕಡಕೋಳ, ವಿದ್ಯಾನಂದ ತೇಲಿ, ಶಿವಾಜಿ ರೂಪನವರ, ಬಾಳಪ್ಪಾ ನರಟ್ಟಿ, ಶಂಕರ ಕಾಂಬಳೆ, ಮಹಾದೇವ ತುಗಶೆಟ್ಟಿ, ಹಣಮಂತ ಬಣಚೋಡ, ಮಲ್ಲಪ್ಪಾ ದೊಡ್ಡನ್ನವರ, ಚಿದಾನಂದ ಡೊಡ್ಡಣ್ಣವರ, ಅಶೋಕ ದೊಡ್ಡಣ್ಣವರ, ಸಂಗಪ್ಪಾ ದೊಡ್ಡಣ್ಣವರ, ಮುರಿಗೆಪ್ಪಾ ದೊಡ್ಡಣ್ಣವರ, ಕಾಕಾಸಾಹೇಬ ಹೊನಖಾಂಡೆ, ಶ್ರೀಶೈಲ ಧಡ್ಡಣ್ಣವರ, ರಾಮಗೊಂಡ ಧಡ್ಡಣ್ಣವರ, ಆನಂದ ಬಾಮನೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಶಾಲಾ ಮಕ್ಕಳು ಗ್ರಂಥಾಲಯ ಸದುಪಯೋಗ ಪಡೆದುಕೊಳ್ಳಬೇಕು: ಬಸವರಾಜ ಪಣದಿ

**ಬೆಳಗಾವಿ ವಾರ್ತೆ ಬೆಟಗೇರಿ:** ಗ್ರಾಮೀಣ ವಲಯದಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಅರಿವು ಕೇಂದ್ರಗಳು ಶಾಲಾ ಮಕ್ಕಳ ಕಲಿಕೆಗೆ ಆಶಾಕಿರಣವಿದ್ದಂತೆ ಎಂದು ಗೋಕಾಕ ತಾಲೂಕಿನ ಬೆಟಗೇರಿ ಗ್ರಾಪಂ ಗ್ರಂಥಾಲಯ ಮತ್ತು ಅರಿವು ಕೇಂದ್ರದ ಮೇಲ್ವಿಚಾರಕ ಬಸವರಾಜ ಪಣದಿ ಹೇಳಿದರು.

ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮ ಪಂಚಾಯತಿ ಹಾಗೂ ಗ್ರಾಮ ಪಂಚಾಯತಿ ಗ್ರಂಥಾಲಯದ ಸಹಯೋಗದಲ್ಲಿ ಸ್ಥಳೀಯ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಅರಿವು ಕೇಂದ್ರದಲ್ಲಿ ಏ.8 ರಿಂದ ಮೇ.24 ತನಕ ನಡೆದ ಗ್ರಾಮೀಣ ಮಕ್ಕಳ ಬೇಸಿಗೆ ಶಿಬಿರದ ಸಮಾರೂಪ ಸಮಾರಂಭದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿ, ಇಂದಿನ ಯುಗದಲ್ಲಿ ಶಾಲಾ ಮಕ್ಕಳು ಓದುವ ಹವ್ಯಾಸ ಬೆಳಸಿಕೊಳ್ಳಬೇಕು ಮತ್ತು ಗ್ರಂಥಾಲಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಸ್ಥಳೀಯ ಶಿಕ್ಷಣಪ್ರೇಮಿ ಲಖನ ಚಂದರಗಿ ಮಾತನಾಡಿ, ಜ್ಞಾನ ಸಂಪತ್ತಿಗಿಂತ ಇನ್ನೊಂದು ಸಂಪತ್ತಿಲ್ಲಾ, ನಾವು ಕಷ್ಟಪಟ್ಟು ಸಂಪಾದಿಸಿದ ಆಸ್ತಿ, ಅಂತಸ್ತು ನಶಿಸಿ ಹೋಗಬಹುದು, ಜ್ಞಾನ ಎಂದು ನಶಿಸಿ ಹೋಗುವುದಿಲ್ಲಾ, ವಿದ್ಯಾರ್ಥಿಗಳು ಶಾಲಾ ಬಿಡುವಿನ ವೇಳೆಯಲ್ಲಿ ಉತ್ತಮ ಪುಸ್ತಕಗಳು ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರಕವಾಗುವ ಪುಸ್ತಕಗಳನ್ನು ಓದಬೇಕು ಎಂದು ಅಭಿಪ್ರಾಯಿಸಿದರು.

ಸ್ಥಳೀಯ ಗ್ರಾಪಂ ಕಾರ್ಯದರ್ಶಿ ಮಾರುತಿ ತಳವಾರ ಅಧ್ಯಕ್ಷತೆ ವಹಿಸಿದ್ದರು. ಏ.8 ರಿಂದ ಮೇ.24 ತನಕ ಸ್ಥಳೀಯ ಗ್ರಂಥಾಲಯದಲ್ಲಿ ನಡೆದ ಗ್ರಾಮೀಣ ಮಕ್ಕಳ ಬೇಸಿಗೆ ಶಿಬಿರದಲ್ಲಿ ಪಾಲ್ಗೊಂಡ ಮಕ್ಕಳಿಗೆ ನೋಟಬುಕ್ಕ, ಪೆನ್ನ ಸೇರಿದಂತೆ ಶೈಕ್ಷಣಿಕ ಕಲಿಕಾ ಉಪಕರಣಗಳನ್ನು ಇಲ್ಲಿಯ ಗ್ರಾಮ ಪಂಚಾಯತ ವತಿಯಿಂದ ಈ ವೇಳೆ ವಿತರಿಸಿದರು.




ಬೆಟಗೇರಿ: ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಅರಿವು ಕೇಂದ್ರದಲ್ಲಿ ಗ್ರಾಮೀಣ ಮಕ್ಕಳ ಬೇಸಿಗೆ ಶಿಬಿರದ ಸಮಾರೂಪ ಸಮಾರಂಭ ನಡೆಯಿತು.

ರಾಮಣ್ಣ ಮುಧೋಳ, ವಿಠ್ಠಲ ಕೋಣಿ, ಸಿದ್ಧಾರೂಢ ಸವತಿಕಾಯಿ, ಮಣಿಕಂಠ ಐದುಡ್ಡಿ, ಗ್ರಾಪಂ ಸಿಬ್ಬಂದಿ, ಗಣ್ಯರು, ಶಿಕ್ಷಣ ಪ್ರೇಮಿಗಳು, ಶಾಲಾ ಮಕ್ಕಳು ಇದ್ದರು.

# ಕೃಷಿ ಇಲಾಖೆಯಿಂದ ರೈತರಿಗೆ ಬೀಜ, ಗೊಬ್ಬರ ವಿತರಣೆ



**ಬೆಳಗಾವಿ ವಾರ್ತೆ ಗದಗ :** ಜಿಲ್ಲೆಯ ರೈತರಿಗೆ ಕೃಷಿ ಇಲಾಖೆಯಿಂದ ಮುಂಗಾರು ಬಿತ್ತನೆಗಾಗಿ ಬೀಜ, ಗೊಬ್ಬರವನ್ನು ವಿತರಣೆ ಕಾರ್ಯಕ್ರಮವನ್ನು ಕೃಷಿಕ ಸಮಾಜದ ಜಿಲ್ಲಾ ಉಪಾಧ್ಯಕ್ಷರಾದ ರಾಮಣ್ಣ ಹೂವಣ್ಣವರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಮಲ್ಲಯ್ಯ ಕೊರವನವರ, ಕೃಷಿ ಅಧಿಕಾರಿ ರಾಜೇಶ್ವರಿ ಸಜ್ಜನ, ರೈತ ಮುಖಂಡರಾದ ಆರ್.ಆರ್. ಕಾಶಪ್ಪನವರ, ಹುಚ್ಚಣ್ಣ ಶ್ಯಾಪೂರ, ಗದಗ ತಾಲ್ಲೂಕಾಧ್ಯಕ್ಷ ಯಲ್ಲಪ್ಪ ಬಾಬರಿ, ಹಿರೇಮಠ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಬಕ್ರೀದ ಹಬ್ಬದ ಪ್ರಯುಕ್ತ ಜರುಗಿದ ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆ



**ಬೆಳಗಾವಿ ವಾರ್ತೆ ಧಾರವಾಡ:** ಮೇ.25ರಂದು ಬೆಳಿಗ್ಗೆ ಧಾರವಾಡ ಜಿಲ್ಲಾ ಪೊಲೀಸ್ ಕಾರ್ಯಾಲಯದಲ್ಲಿ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರ ಅಧ್ಯಕ್ಷತೆಯಲ್ಲಿ ಬಕ್ರೀದ ಹಬ್ಬದ ಪ್ರಯುಕ್ತ ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆ ಜರುಗಿತು.

ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ಸಭೆಯನ್ನು ಉದ್ದೇಶಿಸಿ ಮಾತನಾಡಿ, ಮೇ 28, 2026 ರಂದು ಆಚರಿಸುವ ಬಕ್ರೀದ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಸಾಮರಸ್ಯದಿಂದ ಆಚರಿಸಲು ತಿಳಿಸಿದರು. ನಂತರ ಸಭೆಯಲ್ಲಿ ಹಾಜರಿದ್ದ ಎಲ್ಲ ತಾಲೂಕಿನ ಮುಖಂಡರು ಮಾತನಾಡಿದರು.

# ಜಿಲ್ಲಾಡಳಿತ ಭವನದಲ್ಲಿ ಪ್ರವಾಸೋದ್ಯಮ ಇಲಾಖೆಯ ಮೊಬೈಲ್ ಕ್ಯಾಂಟೀನ್ ವಾಹನ ವಿತರಣೆ



**ಬೆಳಗಾವಿ ವಾರ್ತೆ ಗದಗ :** ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯ ಆವರಣದಲ್ಲಿ ಸೋಮವಾರ ಪ್ರವಾಸೋದ್ಯಮ ಇಲಾಖೆ ಮೊಬೈಲ್ ಕ್ಯಾಂಟೀನ್ ವಾಹನಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್ ಕೆ ಪಾಟೀಲರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ ಬಿ ಅಸೂಟಿ, ತಾಲ್ಲೂಕು ಅಧ್ಯಕ್ಷ ಅಶೋಕ ಮಂದಾಲಿ, ನೀಲವ್ವ ಬೋಳನವರ, ಮಾಜಿ ಶಾಸಕ ರಾಮಣ್ಣ ಲಮಾಣಿ, ಪಾರುಕ್ ಹುಬ್ಬಳ್ಳಿ, ಸ್ಥಳೀಯ ಮುಖಂಡರು, ಗದಗ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೋಟ್ರೇಶ್ ವಿಭೂತಿ ಇತರರು ಉಪಸ್ಥಿತರಿದ್ದರು.

# ನೂತನ ಪತ್ರಿಕಾ ವಾಹನಕ್ಕೆ ಸಚಿವ ಎಚ್ ಕೆ ಪಾಟೀಲ ಚಾಲನೆ



**ಬೆಳಗಾವಿ ವಾರ್ತೆ ಗದಗ :** ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯ ಆವರಣದಲ್ಲಿ ಸೋಮವಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೂತನ ಪತ್ರಿಕಾ ವಾಹನಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್ ಕೆ ಪಾಟೀಲರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ ಬಿ ಅಸೂಟಿ, ತಾಲ್ಲೂಕು ಅಧ್ಯಕ್ಷ ಅಶೋಕ ಮಂದಾಲಿ, ನೀಲವ್ವ ಬೋಳನವರ, ಮಾಜಿ ಶಾಸಕ ರಾಮಣ್ಣ ಲಮಾಣಿ, ಪಾರುಕ್ ಹುಬ್ಬಳ್ಳಿ, ಸ್ಥಳೀಯ ಮುಖಂಡರು, ಗದಗ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ, ಇತರರು ಉಪಸ್ಥಿತರಿದ್ದರು.

# ಜಿಲ್ಲಾ ಯೋಜನಾ ಸಮಿತಿ ಸಭೆ

## ಜನರಿಂದಲೇ ಅಭಿವೃದ್ಧಿ ಯೋಜನೆಗಳು ರೂಪುಗೊಳ್ಳಬೇಕು: ಸಚಿವ ಎಚ್.ಕೆ.ಪಾಟೀಲ

**ಬೆಳಗಾವಿ ವಾರ್ತೆ ಗದಗ:** ಜನರಿಂದಲೇ ಅಭಿವೃದ್ಧಿ ಯೋಜನೆಗಳು ರೂಪುಗೊಳ್ಳಬೇಕು. ಕೆಳಮಟ್ಟದಿಂದ ಮೇಲ್ಮಟ್ಟದವರೆಗೆ ಆಡಳಿತ ರೂಪಿಸಲು ಜಿಲ್ಲಾ ಯೋಜನಾ ಸಮಿತಿ ರಚಿಸಲಾಗಿದೆ. ಈ ಸಭೆಯು ನಿಜವಾಗಿಯೂ ಐತಿಹಾಸಿಕವಾದದ್ದು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಯೋಜನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪಂಚಾಯತ್ ರಾಜ್ ಕಾನೂನು ಅನುಷ್ಠಾನ ಮಾಡುವಲ್ಲಿ ನಮ್ಮ ಜಿಲ್ಲೆಯು ದಿಟ್ಟತನದ ಹೆಜ್ಜೆ ಇಟ್ಟಿದೆ. ಯೋಜನೆ ಸಮಿತಿ ಮಾಡುವ ಕುರಿತು ಪ್ರತಿ ಗ್ರಾಮ ಗ್ರಾಮಗಳಿಗೆ ತೆರಳಿ ಸಭೆಗಳನ್ನು ಏರ್ಪಡಿಸಲಾಗಿದೆ. ಜನರ ಕಲ್ಯಾಣಕ್ಕಾಗಿ ಯೋಜನಾ ಸಮಿತಿ ಬಹು ದೊಡ್ಡ ಕೆಲಸ ಮಾಡಲಿದೆ. ಈ ಯೋಜನೆಯ ಅನುಷ್ಠಾನದಲ್ಲಿ ವಿಶೇಷ ಆಸಕ್ತಿ ತೋರಿಸಬೇಕು. ಇದು ಪ್ರಾರಂಭದ



ಹಂತವಾಗಿದ್ದು ಮುಂದಿನ ದಿನಗಳಲ್ಲಿ ಜಿಲ್ಲೆಯ ಯೋಜನೆಗಳು ರಾಜ್ಯಕ್ಕೆ ಮಾದರಿಯಾಗಬೇಕು. ಜನರ ಆಲೋಚನೆಗಳಿಗೆ ಸ್ಫೂರ್ತಿ ತುಂಬುವುದು ಬಹು ಮುಖ್ಯವಾಗಿದೆ. ಮುಂದಿನ ಆಯವ್ಯಯ ತಯಾರಿಕೆಗೆ ಈ ಯೋಜನೆ ಸಹಕಾರಿಯಾಗಲಿದೆ ಎಂದು ಸಚಿವ ಎಚ್.ಕೆ.ಪಾಟೀಲ ಅವರು ಅಭಿಪ್ರಾಯಪಟ್ಟರು.

ಜಿಲ್ಲೆಯಲ್ಲಿ ಐತಿಹಾಸಿಕ ಸ್ಥಳ ಲಕ್ಕುಂಡಿ ಗ್ರಾಮದ ಪ್ರದೇಶಾಬಿವೃದ್ಧಿ, ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ ಹಾಗೂ ವಿವಿಧ ನೂತನ ಸೌಲಭ್ಯಗಳಿಂದ ಕೂಡಿದ ಕೆ.ಎಚ್.ಪಾಟೀಲ ಜಿಲ್ಲಾ ಆಸ್ಪತ್ರೆ ಹೀಗೆ ಅನೇಕ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಪ್ರಶಂಸೆ ವ್ಯಕ್ತಪಡಿಸಿದ ಜಿಲ್ಲಾ ಉಸ್ತುವಾರಿ ಸಚಿವರು ಗ್ರಾಮ ಪಂಚಾಯತ್ ನಿಂದ ತಾಲೂಕು ಪಂಚಾಯತ್, ತಾಲೂಕು ಪಂಚಾಯತ್ ದಿಂದ ಜಿಲ್ಲಾ ಪಂಚಾಯತ್‌ದಿಂದ ಅಭಿವೃದ್ಧಿ ಯೋಜನೆಗಳ ಸಂಗ್ರಹಣೆ ಮಾಡಿ ಅವುಗಳ ಅನುಷ್ಠಾನವಾಗಬೇಕು. ಅಂದಾಗ ಮಹಾತ್ಮಾ ಗಾಂಧೀಜಿಯವರ ಗ್ರಾಮ ಸ್ವರಾಜ್ಯ ಕನಸು ನನಸಾಗಲು ಸಾಧ್ಯವಾಗುತ್ತದೆ ಎಂದು ಸಚಿವರು ತಿಳಿಸಿದರು.

ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ ಅವರು ಮಾತನಾಡಿ ಸಂವಿಧಾನದ ಸದಾಶಯಗಳೊಂದಿಗೆ ಜನರ ಭಾವನೆಗಳನ್ನು ಅರಿತುಕೊಂಡು ಜಿಲ್ಲಾ ಯೋಜನಾ ಸಮಿತಿ ಕಾರ್ಯನಿರ್ವಹಿಸಬೇಕು. 2027–28 ರ ಯೋಜನೆಗಳು ಜನರಿಂದ ರೂಪುಗೊಳ್ಳುವಂತಾಗಬೇಕು. ಈ ನಿಟ್ಟಿನಲ್ಲಿ ಯೋಜನೆಗಳ ಅನುಷ್ಠಾನದಲ್ಲಿ ಗದಗ ಜಿಲ್ಲೆಯು ದೇಶದಲ್ಲಿಯೇ ಮಾದರಿಯಾಗಬೇಕು. ಅಂದಾಗ ಮಾತ್ರ ಗ್ರಾಮ ರಾಜ್ಯ ರಾಮರಾಜ್ಯವಾಗಲಿದೆ ಎಂದರು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾದಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಮಾಜಿ ಶಾಸಕ ರಾಮಣ್ಣ ಲಮಾಣಿ, ಗಣ್ಯರಾದ ಎಲ್.ಡಿ.ಚಂದಾವರಿ, ಕೃಷ್ಣ ಪರಾಪೂರ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಟಾದಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ.ಕಂಬಾಳಿಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು , ಸಮಿತಿಯ ಸದಸ್ಯರುಗಳು ಹಾಜರಿದ್ದರು.

# ಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷರಿಗೆ ಸನ್ಮಾನ

**ಬೆಳಗಾವಿ ವಾರ್ತೆ ಗದಗ :** ಕರ್ನಾಟಕ ಜನಶಕ್ತಿ ಕಟ್ಟಡ ಕಾರ್ಮಿಕ ಮತ್ತು ಇತರೆ ನಿರ್ಮಾಣ ಸಂಘದ ರಾಜ್ಯಾಧ್ಯಕ್ಷರಾದ ನಾಗರಾಜ್ ಎಮ್, ರಾಜ್ಯ ಸಂಚಾಲಕ ಬಸವರಾಜ ಅವರನ್ನು ಜಿಲ್ಲಾ ಘಟಕದಿಂದ ನಗರದ ಗಂಗಾಪೂರ ಪೇಟೆಯಲ್ಲಿ ಸನ್ಮಾನಿಸಲಾಯಿತು.

ಇದಕ್ಕೂ ಮುನ್ನ ಗದಗ ಜಿಲ್ಲೆಯಲ್ಲಿ ಕಟ್ಟಡ ಕಾರ್ಮಿಕರ ಸಂಘದ ಜಿಲ್ಲಾ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಲಕ್ಷ್ಮೇಶ್ವರ ಪುರುಷ ಮತ್ತು ಮಹಿಳಾ ಅಧ್ಯಕ್ಷ ಉಪಾಧ್ಯಕ್ಷರುಗಳನ್ನು ಆಯ್ಕೆ ಮಾಡಿ ಆದೇಶ ಪತ್ರ ಹಾಗೂ ಐಡಿ ಕಾರ್ಡುಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಹಿಳಾ ರಾಜ್ಯಾಧ್ಯಕ್ಷೆ ನಾಗವೇಣಿ ಕೆ.ಯು, ರಾಜ್ಯ ಖಜಾಂಚಿ ವಿಷಕಂಠ ಗೌಡ್ರು., ಗದಗ ಜಿಲ್ಲಾಧ್ಯಕ್ಷ ಮಹಮ್ಮದಅಲಿ ಬಾವಾಜಿ, ಉಪಾಧ್ಯಕ್ಷ ಮೋಹನ ಇಮರಾಪೂರ, ಪ್ರಧಾನ ಕಾರ್ಯದರ್ಶಿ ಸುರೇಶ ಕುಂಬಾರ, ಧಾರವಾಡ ಜಿಲ್ಲಾ ಮಹಿಳಾ ಅಧ್ಯಕ್ಷ ಮಂಜುಳಾ, ಲಕ್ಷ್ಮೇಶ್ವರ ತಾಲೂಕು ಅಧ್ಯಕ್ಷ ಪ್ರಶಾಂತ, ಪದಾಧಿಕಾರಿ ಸವಿತಾ ಇಮರಾಪೂರ, ಮಂಜುನಾಥ ನರೇಗಲ್,



ಶಿವಪ್ಪ ಕಿತ್ತೂರ, ಸಿದ್ದಪ್ಪ ಗಳಗಂಟಿ ಸೇರಿದಂತೆ ಮುಂತಾದ ಕಟ್ಟಡ ಕಾರ್ಮಿಕರು ಹಾಗೂ ಇತರೆ ಕಾರ್ಮಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು

# ಗದಗ ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಜನರ ಯೋಜನೆ ರೂಪಿಸಲು ಸಭೆ

## ಸೌಲಭ್ಯಗಳ ಹಂಚಿಕೆ ಸಮರ್ಪಕವಾದರೆ ಪ್ರಜಾಪ್ರಭುತ್ವದ ಸಾರ್ಥಕತೆ ಸಾಧ್ಯ

**ಬೆಳಗಾವಿ ವಾರ್ತೆ ಗದಗ:** ಸರ್ಕಾರದಿಂದ ಅನುಷ್ಠಾನ ಗೊಂಡ ಯೋಜನೆಗಳ ಸೌಲಭ್ಯಗಳು ಫಲಾನುಭವಿಗಳಿಗೆ ಸಮರ್ಪಕವಾಗಿ ಹಂಚಿಕೆಯಾದರೆ ಪ್ರಜಾಪ್ರಭುತ್ವದ ಸಾರ್ಥ ಕತೆ ಕಾಣಬಹುದಾಗಿದೆ ಎಂದುರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಸೋಮವಾರ 2027–2028 ನೇ ಸಾಲಿಗೆ ಗದಗ ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಜನರ ಯೋಜನೆ ರೂಪಿಸಲು ಸಭೆಯನ್ನುದ್ದೇಶಿಸಿ ಮಾತನಾಡಿದರು. ಗದಗ ಜಿಲ್ಲೆಯು ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಅಗ್ರ ಸ್ಥಾನದಲ್ಲಿದೆ. ಪ್ರಬಲ ಆಡಳಿತ ವ್ಯವಸ್ಥೆಯನ್ನು ಹೊಂದಿದ ಈ ಜಿಲ್ಲೆಯಲ್ಲಿ ಡಿಬಿಓಟಿ ಮೂಲಕ ಕುಡಿಯುವ ಜಿಲ್ಲೆಯ ಗ್ರಾಮಗಳಿಗೆ ನೀರು ಪೂರೈಕೆಯಾಗುತ್ತಿದೆ. ಶುದ್ಧ ಹವಾಮಾನದಲ್ಲಿ ಅಗ್ರ ಸ್ಥಾನದಲ್ಲಿರುವ ಜಿಲ್ಲೆ ಪಂಚಾಯತ್‌ರಾಜ್ ವ್ಯವಸ್ಥೆಯಲ್ಲಿ ಬಿಂಕದಕಟ್ಟಿ ಗ್ರಾಮ ಪಂಚಾಯಿತಿಯು ರಾಷ್ಟ್ರಮಟ್ಟದಲ್ಲಿಯೇ ಗುರುತಿಸಿಕೊಂಡಿದೆ ಎಂದರು.

ಸರ್ಕಾರದ ಯೋಜನೆಗಳು ಕೆಳಹಂತದಿಂದ ಮೇಲಿನ ಹಂತಕ್ಕೆ ರೂಪುಗೊಳ್ಳಬೇಕು. ಅಂದಾಗ ಮಾತ್ರ ಮಹಾತ್ಮಾ ಗಾಂಧೀಜಿಯವರ ಗ್ರಾಮ ಸ್ವರಾಜ್ ಕನಸು ನನಸಾಗಲು ಸಾಧ್ಯವಾಗುತ್ತದೆ. ಗ್ರಾಮ ಪಂಚಾಯತ್‌ದಿಂದ ತಾಲೂಕು ಪಂಚಾಯತ್, ತಾಲೂಕು ಪಂಚಾಯತ್‌ದಿಂದ ಜಿಲ್ಲಾ ಪಂಚಾಯತ್‌ದವರೆಗೆ ಯೋಜನೆಗಳನ್ನು ರೂಪಿಸಿ ಅವುಗಳ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು. ಜಿಲ್ಲೆಯಲ್ಲಿನ ಯೋಜನೆಗಳು ರಾಜ್ಯಕ್ಕೆ ಹಾಗೂ ರಾಷ್ಟ್ರಕ್ಕೆ ಮಾದರಿಯಾಗಬೇಕು. ಈ ನಿಟ್ಟಿನಲ್ಲಿ ಗ್ರಾಮ ಪಂಚಾಯತ್‌ನವರು ತಮಗೆ ನಿರ್ವಹಿಸಿದ ಕೆಲಸ ಸಮರ್ಪಕವಾಗಿ ನಿರ್ವಹಿಸಬೇಕು ಎಂದರು.

ಆಹಾರ ಧಾನ್ಯಗಳ ಸಂಸ್ಕೃತಿಯನ್ನು ಕಾಪಾಡಿಕೊಂಡು ನಮ್ಮ ದೈನಂದಿನ ಜೀವನದಲ್ಲಿ ಸಿರಿಧಾನ್ಯದ ಬಳಕೆಯು ಅನುಷ್ಠಾನವಾಗಬೇಕು. ಬ್ರಿಜ್ ಟು ವ್ಯಾಲಿ ಪ್ರೊಜೆಕ್ಟ್ ಕರ್ನಾಟಕದಲ್ಲಿಯೇ ಉತ್ತಮ ಪ್ರೊಜೆಕ್ಟ್ ಆಗಿದೆ. ಸಿರಿಧಾನ್ಯದ ಬಳಕೆಯಿಂದ ದೇಶದ ಭವಿಷ್ಯ ಸುಧಾರಣೆಯಾಗಲಿದೆ.



ಪ್ರಕೃತಿ ಸಂರಕ್ಷಣೆ 252 ಕಾಯ್ದೆ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದ ಒಪ್ಪಿಗೆಯೂ ಬೇಕಾಗುತ್ತದೆ. ಅದಕ್ಕಾಗಿ ಪ್ರಯತ್ನಿಸಲಾಗುವುದು ಎಂದು ಸಚಿವ ಎಚ್.ಕೆ. ಪಾಟೀಲರು ಅಭಿಪ್ರಾಯ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ ಅವರು ಮಾತನಾಡಿ ಸರ್ಕಾರದ ಮುಂದಿನ ಯೋಜನೆಗಳು ಜನರಿಂದಲೇ ರೂಪುಗೊಳ್ಳಲಿವೆ. ಆಯಾ ಗ್ರಾಮದ ಜನರು ತಮ್ಮ ಗ್ರಾಮಗಳಲ್ಲಿನ ಯೋಜನೆಗಳನ್ನು ಗ್ರಾಮ ಸಭೆಗಳಲ್ಲಿ ನಿರ್ಣಯಿಸಿ ರೂಪಿಸಬೇಕು. ಗ್ರಾಮ ಪಂಚಾಯತ್ ಆದ್ಯತೆಯ ಪಟ್ಟಿಯು ಸರ್ಕಾರದಲ್ಲಿ ಅನುಷ್ಠಾನಗೊಳ್ಳಲಿದೆ. ಯೋಜನೆಗಳಲ್ಲ ಏನಾದರೂ ಬದಲಾವಣೆಯನ್ನು ತರುವುದಿದ್ದರೂ ಸಹಿತ ಗ್ರಾಮಸಭೆಯ ಮುಂದಿಟ್ಟು ನಂತರ ಬದಲಾವಣೆಗಳಾಗಬೇಕು. ಪಂಚಾಯತ್‌ಗಳು ರಾಜ್ಯದ ಅಭಿವೃದ್ಧಿಗೆ ಪೂರಕವಾಗಿ ಕಲಸ ಮಾಡಬೇಕು. ಜಿಲ್ಲೆ ಯೋಜನೆ ರೂಪಿಸುವಲ್ಲಿ ರಾಜ್ಯಕ್ಕೆ ಮಾದರಿಯಾಗ ಬೇಕು ಈ ನಿಟ್ಟಿನಲ್ಲಿ ಗ್ರಾಮ ಪಂಚಾಯತ್ ನವರು ತಮ್ಮ ಪಾಲಿನ ಕರ್ತವ್ಯವನ್ನು ಸಮರ್ಥವಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.

ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ ಅವರು ಮಾತನಾಡಿ ಜಿಲ್ಲೆಗೆ ಬೇಕಾಗಿರುವ ಯೋಜನೆ ಗ್ರಾಮ ಪಂಚಾಯತಿ ಹಂತದಿಂದ ಹಿಡಿದು ಅವರಿಂದಲೇ ಸಂಗ್ರಹಿಸಿ ಯೋಜನೆ ರೂಪಿಸಲಾಗುವುದು. ಎಲ್ಲ ಕ್ಷೇತ್ರದಲ್ಲಿ ಪ್ರಗತಿ ಸಾಧಿಸಿದಾಗ ಮಾತ್ರ ಜಿಲ್ಲೆ ಅಬಿವೃದ್ದಿ ಹೊಂದಲು ಸಾಧ್ಯವಾಗುತ್ತದೆ. ಗದಗ ಜಿಲ್ಲೆಯ ಕೂಡ ಸರ್ವಾಂಗೀಣ ಅಭಿವೃದ್ಧಿಯಾಗಬೇಕು. ದಕ್ಷಿಣ ಕನ್ನಡ . ಉಡುಪಿ. ಬೆಳಗಾವಿ ಇತರೆ ಜಿಲ್ಲೆಗಳು ಮುಂದುವರಿದ ಜಿಲ್ಲೆಗಳಾಗಿವೆ. ಜಿಲ್ಲೆಯ ಅಬಿವೃದ್ದಿಗೆ ಸಾಕ್ಷರತೆ ಪ್ರಮಾಣ ಮುಖ್ಯವಾಗಿದೆ. ಜಿಲ್ಲೆಯಲ್ಲಿ ಮೂಲಭೂತ ಸೌಲಭ್ಯ. ಕುಡಿಯುವ ನೀರಿನ ಸರಬರಾಜು ಕುರಿತಂತೆ ಕೊರತೆಗಳ ಪಟ್ಟಿ ತಯಾರಿಸಬೇಕು. ಗ್ರಾಮ ಪಂಚಾಯತನವರು ತಮ್ಮ ಅಧಿಕಾರದ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಪ್ರತಿಷ್ಠಿತ ರಾಮನ್ ಮ್ಯಾಗೆಸೆ ಪ್ರಶಸ್ತಿ ಪುರಸ್ಕೃತ ಮತ್ತು ಸ್ಟಾಕ್ ಹೋಂ ಜಲ ಪ್ರಶಸ್ತಿ ಪುರಸ್ಕೃತರಾದ ರಾಜೇಂದ್ರ ಸಿಂಗ್ ಅವರು ಮಾತನಾಡಿ ದೇಶದ ಪ್ರಗತಿಗೆ ಸಂಸ್ಕೃತಿ ಮತ್ತು ಪ್ರಕೃತಿ ರಕ್ಷಣೆಯು ಬಹಳ ಮುಖ್ಯವಾಗಿದೆ. ಸಂಸ್ಕೃತಿ ಮತ್ತು ಪ್ರಕೃತಿ ರಕ್ಷಣೆ ಎರಡೂ ಮುಂದಿನ ಸ್ಥಾನದಲ್ಲಿದ್ದರೆ ಭಾರತದ ಜಿಡಿಪಿ ಮೊದಲಿನ ಸ್ಥಾನದಲ್ಲಿರುತ್ತದೆ. ಬಡಜನರು ಉನ್ನತ ಸ್ಥಾನಕ್ಕೇರಲು ಯೋಜನಾ ಸಮಿತಿ ಸಹಾಯವಾಗಲಿದೆ. ಗ್ರಾಮದ ಜನರು ಸಂಘಟಿತರಾದಾಗ ಸುಧಾರಣೆ ಸಾಧ್ಯವಾಗುತ್ತದೆ. ಗ್ರಾಮಸಭೆಯಲ್ಲಿ ಮಣ್ಣು ಮತ್ತು ನೀರಿನ ಸಂರಕ್ಷಣೆಯ ಕುರಿತು ಚರ್ಚೆಯಾಗಬೇಕು. ಗ್ರಾಮಸ್ಥರು ಸ್ವಾವಲಂಬಿಗಳಾಗಬೇಕು. ತಮ್ಮ ಪ್ರದೇಶ ದಲ್ಲಿನ ನೀರು ಮತ್ತು ಮಣ್ಣಿನ ಸಂರಕ್ಷಣೆ , ಬೀಜ ಉತ್ಪಾದನೆ ಮಾಡುವುದು ಅವರ ಆದ್ಯ ಕರ್ತವ್ಯವಾಗಬೇಕು ಎಂದು ತಿಳಿಸಿದ ರು. ಈ ಹಿಂದೆ ಅವರು ನೀರಿನ ಸಂರಕ್ಷ ಣೆಗಾಗಿ ಕೈಗೊಂಡ ಕ್ರಮಗಳನ್ನು ವಿವರಿಸಿದರು.

ಆರೋಗ್ಯ ಮತ್ತು ಆಹಾರ ತಜ್ಞ ಡಾ. ಖಾದರ್ ಅವರು ಮಾತನಾಡಿ ಮಣ್ಣಿನ ಮತ್ತು ನೀರಿನ ಸಂರಕ್ಷಣೆ ಮಾಡುವುದು ಮುಖ್ಯ ಕೆಲಸವಾಗಿದೆ. ಗ್ರಾಮಿಣ ಪ್ರದೇಶದಲ್ಲಿ ಗೊಮಾಳ ಸಂಸ್ಕ್ರತಿಯ ಪ್ರಾಮುಖ್ಯತೆ ತಿಳಿಸಿದರು. ನಮ್ಮ ಭೂಮಿಯನ್ನು ನಾವು ಸಂರಕ್ಷಣಾ ಮಾಡಬೇಕು. ಸಾವಯವ ಧಾನ್ಯದ ಬಳಕೆ ಹೆಚ್ಚಾಗಬೇಕು. ನಗರೀಕರಣ ಕ್ಕೆ ಪ್ರಾಮುಖ್ಯತೆ ಕೊಟ್ಟ ಹಾಗೆ ಗ್ರಾಮಿಣ ಪ್ರದೇಶದ ಪ್ರಾಮುಖ್ಯತೆ ಕೊಡಬೇಕು. ಅತಿಯಾದ ರಾಸಾಯನಿಕ ಗೊಬ್ಬರ ಗಳ ಬಳಕೆ ವಿನಾಶಕಾರಿಯಾಗಿದೆ. ಎಲ್ಲ ಜೀವರಾಶಿಗಳಿಗೆ ಮಣ್ಣು ಮತ್ತು ನೀರು ಬಹಳ ಮುಖ್ಯವಾಗಿದೆ. ಆರೋಗ್ಯ ನಮ್ಮ ಸ್ವಂತ ಸ್ವತ್ತಾಗಬೇಕು. ನಮ್ಮ ಪ್ರದೇಶದ ಮಣ್ಣಿನಲ್ಲಿಯೇ ನಮ್ಮ ಆಹಾರ ಬೆಳೆದುಕೊಳ್ಳಲು ಪ್ರಯತ್ನಿಸಬೇಕು. ಅನವಶ್ಯಕ ಆಹಾರ ಸೇವನೆಯಿಂದಲೇ ಅನಾರೋಗ್ಯ ಉಂಟಾಗುವುದನ್ನು ನಾವು ಕಾಣುತ್ತಿದ್ದೇವೆ. ಮಣ್ಣು ಮತ್ತು ನೀರು ಪೋಲಾಗದಂತೆ ತಡೆದು ಸ್ವಾವಲಂಬಿಯಾಗಿ ಬೆಳೆ ಬೆಳಯಬೇಕು ಎಂದು ಡಾ.ಖಾದರ್ ವಿವರಿಸಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ ಸ್ವಾಗತಿಸಿದರು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಪ್ರಾಸ್ತಾವಿಕವಾಗಿ ಮಾತನಾಡಿ ಜಿಲ್ಲಾ ಮಟ್ಟದಿಂದ ಅಭಿಪ್ರಾಯಗಳನ್ನು ಸಂಗ್ರಹಿಸಿ ಬಜೆಟ್ ತಯಾರಿಸಲಾಗುತ್ತಿದೆ. ಸ್ವಾವಲಂಬಿ ಬದುಕು ಸ್ವಾಭಿಮಾನದ ಬದುಕಾಗಿದೆ. ಗ್ರಾಮ ಪಂಚಾಯತ್ ಗಳಿಂದ ಮಾಹಿತಿ ಸಂಗ್ರಹಣೆಯಾಗಿ ತಾಲೂಕು ಪಂಚಾಯತ್ ನಂತರ ಜಿಲ್ಲಾ ಪಂಚಾಯತ್ ವರೆಗೆ ಜಿಲ್ಲೆಯಲ್ಲಿ ಬೇಕಾಗುವ ಒಂದು ಸಮಗ್ರ ಕೈ ಪಿಡಿಯನ್ನು ಸರ್ಕಾರದ ಮುಂದೆ ಇಟ್ಟಾಗ ಯೋಜನೆ ರೂಪಿಸಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಮಾಜಿ ಶಾಸಕ ರಾಮಣ್ಣ ಲಮಾಣಿ, ಗಣ್ಯರಾದ ಸಿದ್ದು ಪಾಟೀಲ, ಬಳಿಗಾರ, ವಾಸಣ್ಣ ಕುರಡಗಿ, ಎಲ್.ಡಿ.ಚಂದಾವರಿ, ಕೃಷ್ಣ ಪರಾಪೂರ, ಜಿಲ್ಲಾ ಪೊಲೀಸ ವರಿಷ್ಟಾದಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ಯೋಜನಾಧಿಕಾರಿ ಎ.ಎ.ಕಂಬಾಳಿಮಠ, ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಆಡಳಿತಾಧಿಕಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಅಧಿಕ ಮಳೆಯಿಂದ ತೊಂದರೆಗೀಡಾದ ಗಂಗಿಮಡಿ ಪ್ರದೇಶಕ್ಕೆ ಸಚಿವ ಎಚ್.ಕೆ. ಪಾಟೀಲ ಭೇಟಿ, ಸಂತ್ರಸ್ತರಿಗೆ ಸಾಂತ್ವಾನ



**ಬೆಳಗಾವಿ ವಾರ್ತೆ ಗದಗ:** ಗದಗ ನಗರದ ಗಂಗಿಮಡಿ ಪ್ರದೇಶದಲ್ಲಿ ಅಧಿಕ ಮಳೆಯಿಂದ ತೊಂದರೆಗೀಡಾದ ಕುಟುಂಬಗಳಿಗೆ ಧೈರ್ಯ ತುಂಬಲು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ಸೋಮವಾರ ಸ್ಥಳಕ್ಕೆ ಭೇಟಿ ನೀಡಿ, ಸಂತ್ರಸ್ತರ ಸಮಸ್ಯೆಗಳನ್ನು ಆಲಿಸಿ ಪರಿಸ್ಥಿತಿಯನ್ನು ಖುದ್ದಾಗಿ ಪರಿಶೀಲಿಸಿದರು.

ಸ್ಥಳದಲ್ಲೇ ಅಧಿಕಾರಿಗಳಿಂದ ಮಾಹಿತಿ ಪಡೆದು, ಅಗತ್ಯ ನೆರವು ಕಲ್ಪಿಸುವಂತೆ ಸೂಚಿಸಿದರು.

ಸಂತ್ರಸ್ತರೊಂದಿಗೆ ಮಾತನಾಡಿದ ಸಚಿವರು, ನಿಮ್ಮ ಪರಿಸ್ಥಿತಿಯನ್ನು ನಾನು ಖುದ್ದಾಗಿ ಅವಲೋಕನ ಮಾಡಿದ್ದೇನೆ. ಸಂಕಷ್ಟದಲ್ಲಿರುವ ಜನರ ನೆರವಿಗೆ ನಮ್ಮ ಸರ್ಕಾರ ಸದಾ ಬದ್ಧವಾಗಿದೆ. ಯಾರೂ ಆತಂಕಪಡುವ ಅಗತ್ಯ ಇಲ್ಲ ಎಂದು ಭರವಸೆ ನೀಡಿದರು.

ಗಂಗಿಮಡಿ ಪ್ರದೇಶದಲ್ಲಿ ಒಟ್ಟು 96 ಕುಟುಂಬಗಳು ತಗಡಿನ ಶೇಡ್‌ಗಳಲ್ಲಿ ಜೀವನ ಸಾಗಿಸುತ್ತಿದ್ದು, ಇದರಲ್ಲಿ 9 ಶೇಡ್‌ಗಳು ಸಂಪೂರ್ಣ ಕುಸಿದಿವೆ. ಈಗಾಗಲೇ ಜಿಲ್ಲಾಡಳಿತದಿಂದ 96 ಕುಟುಂಬಗಳಲ್ಲಿ 88 ಕುಟುಂಬಗಳಿಗೆ ತಲಾ 5 ಸಾವಿರ ರೂಪಾಯಿ ಸಹಾಯಧನ ವಿತರಿಸಲಾಗಿದ್ದು, ಉಳಿದ ಕುಟುಂಬಗಳಿಗೂ ಶೀಘ್ರವೇ ನೆರವು ನೀಡಲಾಗುವುದು ಎಂದು ಸಚಿವರು ತಿಳಿಸಿದರು.

ಕೆಲವರು ಮನೆಗಳಿದ್ದರೂ ಇಲ್ಲಿ ಬಂದು ಶೇಡ್ ಹಾಕಿ ವಾಸಿಸುತ್ತಿರುವ ವಿಚಾರ ಗಮನಕ್ಕೆ ಬಂದಿದೆ. ಗಂಗಿಮಡಿಯಲ್ಲಿ ಮೊದಲ ಹಂತದಲ್ಲಿ 1000 ಮನೆಗಳ ನಿರ್ಮಾಣ ಕಾರ್ಯ ನಡೆಯುತ್ತಿದ್ದು, ನಿಜವಾದ ಅರ್ಹರಿಗೆ ಆದ್ಯತೆ ನೀಡಲಾಗುವುದು. ಸಂತ್ರಸ್ತರಿಗೆ ಮನೆ ನೀಡಲು ಕ್ರಮ ವಹಿಸಲಾಗುವುದು ಎಂದು ಎಂದು ಸಚಿವ ಎಚ್ ಕೆ ಪಾಟೀಲರು ಹೇಳಿದರು.

ಸಂಪೂರ್ಣ ಹಾನಿಗೊಳಗಾದ 9 ಮನೆಗಳ ಕುಟುಂಬಗಳು ಈಗಿನ 5 ಸಾವಿರ ರೂಪಾಯಿ ಸಹಾಯಧನ ಸಾಕಾಗುವುದಿಲ್ಲ ಎಂದು ಮನವಿ ಮಾಡಿದ್ದು, ಕನಿಷ್ಠ 20 ಸಾವಿರ ರೂಪಾಯಿ ನೆರವು ನೀಡುವಂತೆ ಬೇಡಿಕೆ ಇಟ್ಟಿವೆ. ಈ ಬಗ್ಗೆ ಸರ್ಕಾರದಿಂದ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಸದ್ಯ ಸಂತ್ರಸ್ತರು ಶಾಲಾ ಕೊಠಡಿಗಳಲ್ಲಿ ಆಶ್ರಯ ಪಡೆದಿದ್ದು, ಶಾಲೆಗಳು ಆರಂಭವಾಗುವ ಹಿನ್ನೆಲೆಯಲ್ಲಿ ಮಕ್ಕಳ ಶಿಕ್ಷಣಕ್ಕೆ ಯಾವುದೇ ತೊಂದರೆ ಆಗದಿರಲಿ ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದರು.

ಗಂಗಿಮಡಿ ಸಂತ್ರಸ್ಥರಿಗೆ ಜಿಲ್ಲಾಧಿಕಾರಿಗಳು ಈಗಾಗಲೇ ಉತ್ತಮ ಸೌಲಭ್ಯಗಳನ್ನು ಒದಗಿಸಿದ್ದಾರೆ. 96 ಶೇಡ್‌ಗಳಲ್ಲಿ ಯಾರಿಗೆ ಸ್ವಂತ ಮನೆ ಇದೆ, ಯಾರಿಗೆ ಇಲ್ಲ ಎಂಬುದನ್ನು ಅಧಿಕಾರಿಗಳು ಸಮಗ್ರವಾಗಿ ಪರಿಶೀಲಿಸಲಿದ್ದಾರೆ. ನಗರಸಭೆ ನಿಯಮಾವಳಿಗಳ ಅನ್ವಯ ದಾಖಲೆಗಳನ್ನು ಒದಗಿಸಿದವರಿಗೆ ಮನೆ ಮಂಜೂರು ಮಾಡುವ ಪ್ರಕ್ರಿಯೆ ಕೈಗೊಳ್ಳಲಾಗುವುದು ಎಂದು ಸಚಿವ ಎಚ್ ಕೆ ಪಾಟೀಲರು ಹೇಳಿದರು.

ಈ ವೇಳೆ ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿ, ಗಂಗಿಮಡಿ ಪ್ರದೇಶದ 96 ಕುಟುಂಬಗಳಲ್ಲಿ ಸುಮಾರು 60 ಶೇಕಡಾ ಕುಟುಂಬಗಳಿಗೆ ಮನೆ ಮಂಜೂರಾಗಿರುವುದಾಗಿ ತಿಳಿಸಿದರು. ಸಂತ್ರಸ್ತರಿಗೆ ಆಹಾರ, ಆರೋಗ್ಯ ಸೇವೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಜಿಲ್ಲಾಡಳಿತದಿಂದ ಒದಗಿಸಲಾಗಿದೆ ಎಂದರು.

ಸಾರ್ವಜನಿಕರು ಸಚಿವರ ಮುಂದೆ ತಮ್ಮ ಅಳಲನ್ನು ತೋಡಿಕೊಂಡು, ಮಂಜೂರಾದ ಮನೆಗಳ ಮರುಸರ್ವೇ ನಡೆಸಬೇಕು, ಕೆಲವರು ಮಂಜೂರಾದ ಮನೆಗಳನ್ನು ಬಾಡಿಗೆಗೆ ನೀಡಿ ಶೇಡ್‌ಗಳಲ್ಲಿ ವಾಸಿಸುತ್ತಿದ್ದಾರೆ, ಮನೆ ಇಲ್ಲದವರು ತಾತ್ಕಾಲಿಕ ಶೇಡ್‌ಗಳಲ್ಲಿ ಜೀವನ ನಡೆಸುತ್ತಿದ್ದಾರೆ ಎಂದು ದೂರಿದರು.

ಈಗಾಗಲೇ ಸರ್ಕಾರ ನೀಡಿರುವ ನೆರವು ಸಾಕಾಗುತ್ತಿಲ್ಲ, ಹೆಚ್ಚುವರಿ ಸಹಾಯಧನ ನೀಡಬೇಕು ಹಾಗೂ ಶಾಶ್ವತ ಸೂರು ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಗಂಗಿಮಡಿಗೆ ಶಾಶ್ವತ ನೀರಿನ ಸಂಪರ್ಕ ಕಲ್ಪಿಸಿ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ನೀಡಬೇಕು, ಸೋಲಾರ್ ಲೈಟ್‌ಗಳನ್ನು ಅಳವಡಿಸಬೇಕು, ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಹಾಗೂ ಮನೆ ಮಂಜೂರಾಗುವವರೆಗೆ ಇಲ್ಲಿಯೇ ವಾಸಿಸಲು ಅವಕಾಶ ನೀಡಬೇಕು ಎಂದು ಸಾರ್ವಜನಿಕರು ಆಗ್ರಹಿಸಿದರು.

"ನಮ್ಮ ಮನವಿಗೆ ಸ್ಪಂದಿಸಿ ಸಚಿವರು ಇಲ್ಲಿಗೆ ಬಂದು ಪರಿಸ್ಥಿತಿ ಪರಿಶೀಲಿಸಿದ್ದಾರೆ. ಸೂರು ಕಲ್ಪಿಸುವ ಪ್ರಕ್ರಿಯೆ ನಡೆಯುತ್ತಿರುವುದು ನಮಗೆ ಧೈರ್ಯ ತಂದಿದೆ" ಎಂದು ಸ್ಥಳೀಯರು ಅಭಿಪ್ರಾಯಪಟ್ಟರು.

ಇದೇ ವೇಳೆ ಸೇವಾ ತಂಡದ ನೆರವಿನಿಂದ ಶಸ್ತ್ರಚಿಕಿತ್ಸೆಗೊಂಡು ಗುಣಮುಖನಾದ ಸಾರ್ವಜನಿಕನೊಬ್ಬ ಸಚಿವರಿಗೆ ಧನ್ಯವಾದ ಸಲ್ಲಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಜಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ ಬಿ ಅಸೂಟಿ, ತಾಲ್ಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಕೆ ಡಿ ಪಿ ಸಮಿತಿ ಸದಸ್ಯ ಎಸ್ ಎನ್ ಬಳ್ಳಾರಿ, ನೀಲವ್ವ ಬೋಳನವರ, ಸಿದ್ದು ಪಾಟೀಲ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಎಸಿ ಗಂಗಪ್ಪ ಎಂ, ತಹಸೀಲ್ದಾರ ಶ್ರೀನಿವಾಸ ಮೂರ್ತಿ, ಡಾ. ಎಸ್ ಎಸ್ ನೀಲಗುಂದ, ಆರ್ ಎಸ್ ಬುರಡಿ, ಜಿಲ್ಲಾಡಳಿತದ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



# ಜಲಾಗಾರ ಸ್ಥಳಾಂತರಕ್ಕೆ ಆಗ್ರಹ: ರಸ್ತೆ ತಡೆ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಕಲಾಮಹ ವಿದ್ಯಾಲಯದ ಆವರಣದಲ್ಲಿ ನಿರ್ಮಿಸುತ್ತಿರುವ ಬೃಹತ್ ಮೇಲ್ಮಟ್ಟದ ಜಲಗಾರವನ್ನು ಸ್ಥಳಾಂತರಿಸುವಂತೆ ಆಗ್ರಹಿಸಿ ಹಳೆ ವಿದ್ಯಾರ್ಥಿಗಳು ಸಂಗೊಳ್ಳಿ ರಾಯಣ್ಣ ವೃತ್ತದ ಬಳಿ ಪಾಳಾ ಬಾದಾಮಿ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶರಣು ಗೋಡಿ ಪದ್ಮರಾಜ ಪಾಟೀಲ್, ಮಹೇಶ ಹೊಗೆಸೊಪ್ಪಿನ್, ತಿಪ್ಪಣ್ಣ ಸಂಶಿ ಅವರುಗಳು ಇತಿಹಾಸ ಹೊಂದಿರುವ ಕಲಾಮಹಾವಿದ್ಯಾಲಯದ ಆವರಣದಲ್ಲಿ ನಿರ್ಮಿಸುತ್ತಿರುವ ವಿದ್ಯಾರ್ಥಿಗಳ ಪಾಲಿಗೆ ಕಂಟಕವಾಗುವ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ಅಡ್ಡಿಯಾಗುವ ಜಲಾಗಾರ ನಿರ್ಮಾಣವನ್ನು ಜಿದ್ದಿಗೆ ಬಿದ್ದು ನಿರ್ಮಿಸಲು ಮುಂದಾದರೆ ಅದರಿಂದ ಆಗುವ ಯಾವುದೇ ಅನಾಹುತಕ್ಕೂ ನೇರವಾಗಿ ಜಿಲ್ಲಾ ಆಡಳಿತವೇ ಕಾರಣವಾಗುತ್ತದೆ.

ಆದ್ದರಿಂದ ಜಿಲ್ಲಾಧಿಕಾರಿಗಳು ಕೂಡಲೇ ಸ್ಥಳ ಪರಿಶೀಲನೆ ಮಾಡಿ ಕಾಲೇಜ್ ಕ್ಯಾಂಪಸ್ಸಿನಲ್ಲಿ ಜಲಾಗಾರ ನಿರ್ಮಾಣಕ್ಕೆ ಅನುಮೋದನೆ ನೀಡಿದ ಮುಖ್ಯ ಅಧಿಕಾರಿಯನ್ನು ಕೂಡ ಸಸ್ಪೆಂಡ್ ಮಾಡಿ ಕಾಮಗಾರಿಯನ್ನು ಸ್ಥಗಿತಗೊಳಿಸಲು ಗುತ್ತಿಗೆದಾರರಿಗೆ ಖಡಕ್ ಎಚ್ಚರಿಕೆ ನೀಡಬೇಕು.

ಒಂದೊಮ್ಮೆ ಜಿಲ್ಲಾ ಆಡಳಿತ ನಿರ್ಲಕ್ಷ್ಯ ಮಾಡಿದರೆ ಜೂನ್ 1 ರಿಂದ ಉಗ್ರ ಹೋರಾಟಕ್ಕೆ ಹಳೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಸಹಕಾರದೊಂದಿಗೆ ಮುಂದಾಗುವುದಾಗಿ ಎಚ್ಚರಿಸಿದರು.

ರಸ್ತೆ ತಡೆಯ ನಂತರ ಗ್ರೇಡ್ 2 ತಹಸಿಲ್ದಾರ್ ಮಂಜುನಾಥ ಅಮಾಸಿಯವರಿಗೆ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸದಾನಂದ ನಂದಣ್ಣವರ ಇಸ್ಮಾಯಿಲ್ ಆಡೂರ್ ಡಿಬಿ ಫಕೀರಪ್ಪ ಟಾಕಪ್ಪ ಸಾತಪೂತೆ ಸೇರಿದಂತೆ

# ಸಾಮೂಹಿಕ ವಿವಾಹಕ್ಕೆ ಹೆಸರು ನೋಂದಾಯಿಸಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ತಾಲೂಕಿನ ಬಿಲ್ ಕೆರೂರ ಗ್ರಾಮದ ಬಿಲ್ವಾಶ್ರಮ ಹಿರೇಮಠದ ಮೌನ ತಪಸ್ವಿ 108 ಲಿಂ.ಷ.ಬ್ರ.ರುದ್ರಮುನಿ ಶಿವ0ಯೋಗಿ ಶಿವಾಚಾ0ರ್ಯ ಸ್ವಾಮೀಜಿಗಳ 45 ನೇ ಪುಣ್ಯ ದಿನೋತ್ಸವ ಹಾಗೂ ರಥೋತ್ಸವ ಅಂಗವಾಗಿ ಜೂ.28 ರಂದು ಉಚಿತವಾಗಿ ಸಾಮೂಹಿಕ ವಿವಾಹ ಏರ್ಪಡಿಸಲಾಗಿದೆ.

ವಿವಾಹ ಮಾಡಲು ಇಚ್ಛಿಸುವವರು ಜೂ.20 ರೊಳಗೆ ಅಃಕೃತ ಜನನ ದಾಖಲೆಗಳೊಂದಿಗೆ ಹಾಗೂ ಭಾವ ಚಿತ್ರದೊಂದಿಗೆ ಹೆಸರು ನೋಂದಾಯಿಸಿ ಕೊಳ್ಳಬೇಕು ಎಂದು ಷ.ಬ್ರ ಸಿದ್ದಲಿಂಗ ಶಿವಾಚಾ0ರ್ಯರು ಪ್ರಕಟಣೆ0ಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 8095088505, 9743020213 ಸಂಪರ್ಕಿಸಲು ಕೋರಲಾಗಿದೆ.

# ದಲಿತ ಸೇನೆ ನೂತನ ಸಂಘಟನೆಗಳ ಪದಾಧಿಕಾರಿಗಳ ಆಯ್ಕೆ.

## ಶಿಕ್ಷಣದಿಂದ ಮಾತ್ರ ದಲಿತರ ವಿಮೋಚನೆ ಸಾಧ್ಯ : ಜಿಲ್ಲಾಧ್ಯಕ್ಷ ಉಡುಚಪ್ಪ



**ಬೆಳಗಾವಿ ವಾರ್ತೆ ಗಂಗಾವತಿ :** ಶತ ಶತಮಾನಗಳಿಂದ ಶೋಷಣೆಗೆ ಒಳಗಾದ ದಲಿತ ಸಮುದಾಯ ಸಮಾಜದ ಮುಖ್ಯವಾಹಿನಿಗೆ ಬರಬೇಕಾದರೆ ಶಿಕ್ಷಣದಿಂದ ಮಾತ್ರ ವಿಮೋಚನೆ ಸಾಧ್ಯ ಎಂಬ ಅಭಿಪ್ರಾಯವನ್ನು ದಲಿತ ಸೇನೆಯ ಜಿಲ್ಲಾ ಅಧ್ಯಕ್ಷ ಉಡುಚಪ್ಪ ಹೇಳಿದರು.

ಅವರು ರವಿವಾರದಂದು ನಗರದ ನೀರಿಕ್ಷಣಾ ಮಂದಿರದಲ್ಲಿ ದಲಿತ ಸೇನೆಯ ನೂತನ ವಾಗಿ ಆಯ್ಕೆಗೊಂಡಿರುವ ಪದಾಧಿಕಾರಿಗಳಿಗೆ ನೇಮಕಾತಿ ಆದೇಶ ಪತ್ರ ನೀಡಿ ಮಾತನಾಡಿದರು.


ಸಂವಿಧಾನ ಶಿಲ್ಪಿ ಡಾ.ಬಿ ಆರ್ ಅಂಬೇಡ್ಕರ್ ಕಂಡಂತೆ ಅವರ ಆಶಯದಂತೆ ಶಿಕ್ಷಣ ಸಂಘಟನೆ ಹೋರಾಟ ಅವುಗಳ ಜೊತೆಗೆ ಗುಣಮಟ್ಟದ ಉನ್ನತ ಶಿಕ್ಷಣವನ್ನು ಪಡೆದುಕೊಂಡು ಸಮಾಜದಲ್ಲಿ ಸ್ಥಾನಮಾನ ಪಡೆದುಕೊಳ್ಳುವಂತಾಗಬೇಕು ಇದಕ್ಕಾಗಿ ಸಂಘಟನೆಯ ಪದಾಧಿಕಾರಿ ಗಳು ತಮಗೆ ವಹಿಸಿದ ಜವಾಬ್ದಾರಿಯನ್ನು ಚಾಚು ತಪ್ಪದೆ ಯಾವುದೇ ಸಮಾಜದ ಮಗು ಶಿಕ್ಷಣದ ಸೌಲಭ್ಯದಿಂದ ವಂಚಿತರಾಗದಂತೆ ಶಾಲೆಗೆ ಕಳಿಸುವಂತಾಗಬೇಕು.

ಜೊತೆಗೆ ಸರ್ಕಾರದಿಂದ ದೊರೆಬಹುದಾದ ಎಲ್ಲಾ ಸೌಲಭ್ಯಗಳನ್ನು ಪಡೆದುಕೊಳ್ಳಲು ಅತ್ಯಂತ ಪ್ರಾಮಾಣಿಕವಾಗಿ ಕಾರ್ಯಪ್ರವೃತ್ತರಾಗಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ಪ್ರಗತಿ ನಗರದ ಗ್ರಾಮ ಘಟಕದ ಅಧ್ಯಕ್ಷರನ್ನಾಗಿ ದುರ್ಗಾರಾಜ್ ಗಂಗಾವತಿ ನಗರ ಘಟಕದ ಅಧ್ಯಕ್ಷರನ್ನಾಗಿ ವಿರುಪಣ್ಣ ಸಂಗಾಪುರ್ ಅವರನ್ನು ಸರ್ವಾನುಮತದಿಂದ ಆಯ್ಕೆಗೊಳಿಸಿ ಆದೇಶ ಪತ್ರವನ್ನು ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ಹಾಗೂ ತಾಲೂಕಿನ ಹಾಗೂ ಗ್ರಾಮದ ಎಲ್ಲಾ ಪದಾಧಿಕಾರಿಗಳು ಪಾಲ್ಗೊಂಡಿದ್ದರು. ಇದಕ್ಕೂ ಪೂರ್ವದಲ್ಲಿ ಡಾಕ್ಟರ್ ಬಿ ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜಿ ಸಲ್ಲಿಸಿ ನೂತನ ಪದಾಧಿಕಾರಿಗಳಿಗೆ ಪ್ರಮಾಣ ವಚನ ಬೋಧಿಸಿದರು.. ಈ ಸಂದರ್ಭದಲ್ಲಿ ತಾಲೂಕ ಅಧ್ಯಕ್ಷ ಮಂಜುನಾಥ್. ವಕೀಲ ವೀರೇಶ ಈಳಿಗನೂರು ಶಿವಕುಮಾರ್ ಡಿ ಪರಶುರಾಮ್ ಮಂಜುನಾಥ ಕೃಷ್ಣ ಶಿವ ಜಗದೀಶ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

# ಶ್ರೀ ವಿದ್ಯಾನಿಕೇತನ ಕಾಲೇಜಿನಲ್ಲಿ ಟಿಸಿಎಸ್ ಎರಡನೇ ಹಂತದ ಸಂದರ್ಶನ: 248 ಅಭ್ಯರ್ಥಿಗಳ ಭಾಗಿ



**ಬೆಳಗಾವಿ ವಾರ್ತೆ ಗಂಗಾವತಿ:** ಗ್ರಾಮೀಣ ಭಾಗದ ಪದವೀಧರರಿಗೆ ಉತ್ತಮ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಗಂಗಾವತಿ ತಾಲೂಕಿನ ವಡ್ಡರಹಟ್ಟಿಯ ಶ್ರೀ ವಿದ್ಯಾನಿಕೇತನ ಪದವಿ ಕಾಲೇಜಿನಲ್ಲಿ ದೇಶದ ಪ್ರತಿಷ್ಠಿತ ಐಟಿ ಸಂಸ್ಥೆಯಾದ Tata Consultancy Services (ಟಿಸಿಎಸ್) ವತಿಯಿಂದ ಎರಡನೇ ಹಂತದ ನೇರ ಸಂದರ್ಶನ ಪ್ರಕ್ರಿಯೆ ಯಶಸ್ವಿಯಾಗಿ ನಡೆಯಿತು.

ಸಂಸ್ಥೆಯ "ನರ್ಸರಿಯಿಂದ ನೌಕರಿಯವರೆಗೆ" ಎಂಬ ಧ್ಯೇಯವಾಕ್ಯವನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ, ಕಾಲೇಜಿನ ವಿದ್ಯಾರ್ಥಿಗಳಷ್ಟೇ ಅಲ್ಲದೆ ವಿವಿಧ ಕಾಲೇಜುಗಳು ಹಾಗೂ ವಿವಿಧ ಜಿಲ್ಲೆಗಳ ತಾಂತ್ರಿಕೇತರ ಪದವೀಧರರಿಗೆ ಉದ್ಯೋಗಾವಕಾಶ ಒದಗಿಸಲು ಈ ನೇಮಕಾತಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಹಿಂದೆ ಮೇ 5ರಂದು ನಡೆದ ಮೊದಲ ಹಂತದ ವಾಕ್–ಇನ್ ಸಂದರ್ಶನದಲ್ಲಿ ಒಟ್ಟು 410 ಅಭ್ಯರ್ಥಿಗಳು ಭಾಗವಹಿಸಿದ್ದು, ಅವರಲ್ಲಿ 248 ಅಭ್ಯರ್ಥಿಗಳು ಎರಡನೇ ಹಂತಕ್ಕೆ ಆಯ್ಕೆಯಾಗಿದ್ದರು. ಆಯ್ಕೆಯಾದ ಅಭ್ಯರ್ಥಿಗಳಿಗಾಗಿ ಮೇ 23ರಂದು ಟಿಸಿಎಸ್ ಸಂಸ್ಥೆಯು ನೇರ ಸಂದರ್ಶನವನ್ನು ನಡೆಸಿತು.

ಸಂದರ್ಶನ ಪ್ರಕ್ರಿಯೆಗಾಗಿ ಟಿಸಿಎಸ್‌ನ 24 ಅಧಿಕಾರಿಗಳು ಹಾಗೂ ವಿವಿಧ ವಿಭಾಗಗಳ ಮುಖ್ಯಸ್ಥರು ಕಾಲೇಜಿಗೆ ಆಗಮಿಸಿ ಅಭ್ಯರ್ಥಿಗಳ ಕೌಶಲ್ಯ ಮತ್ತು ಅರ್ಹತೆಯನ್ನು ಪರಿಶೀಲಿಸಿದರು.

ಗ್ರಾಮೀಣ ಭಾಗದ ಯುವಜನತೆಗೆ ದೇಶದ ಪ್ರಮುಖ ಕಂಪನಿಯಲ್ಲಿ ಉದ್ಯೋಗ ಪಡೆಯುವ ಅವಕಾಶ ಕಲ್ಪಿಸಿರುವ ಟಿಸಿಎಸ್ ಆಡಳಿತ ಮಂಡಳಿಗೆ ಸಂಸ್ಥೆ ಕೃತಜ್ಞತೆ ಸಲ್ಲಿಸಿದೆ.

ಈ ಕುರಿತು ಮಾತನಾಡಿದ ಶ್ರೀ ವಿದ್ಯಾನಿಕೇತನ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ನೆಕ್ಕಂಟಿ ಸೂರಿಬಾಬು, "ನಮ್ಮ ಭಾಗದ ಪದವೀಧರರಿಗೆ ಗುಣಮಟ್ಟದ ಉದ್ಯೋಗಾವಕಾಶಗಳನ್ನು ಒದಗಿಸುವುದು ಸಂಸ್ಥೆಯ ಪ್ರಮುಖ ಗುರಿಯಾಗಿದೆ.

ಟಿಸಿಎಸ್‌ನಂತಹ ಪ್ರತಿಷ್ಠಿತ ಸಂಸ್ಥೆ ನಮ್ಮ ಕಾಲೇಜಿನಲ್ಲಿ ನೇಮಕಾತಿ ಪ್ರಕ್ರಿಯೆ ನಡೆಸಿರುವುದು ಹೆಮ್ಮೆಯ ಸಂಗತಿ. ಸಂದರ್ಶನದಲ್ಲಿ ಭಾಗವಹಿಸಿದ ಎಲ್ಲ ಅಭ್ಯರ್ಥಿಗಳಿಗೂ ಶುಭವಾಗಲಿ" ಎಂದು ಹಾರೈಸಿದರು.

# ಮೀಸಲಾತಿ ಅನ್ಯಾಯ ಖಂಡಿಸಿ ಮೇ ಇಂದು ಬೆಂಗಳೂರು ಚಲೋ

**ಬೆಳಗಾವಿ ವಾರ್ತೆ ಗಂಗಾವತಿ :** ಪರಿಶಿಷ್ಟ ಜಾತಿಗಳ ಆಂತರಿಕ ಮೀಸಲಾತಿ ವಿರೋಧಿಸಿ ಹಾಗೂ ಬುದ್ಧ, ಅಂಬೇಡ್ಕರ್, ಖಅಖಕ/ಖಿಖಕ ಹೋರಾಟದ ಮೂಲ ಆಶಯಗಳಿಗೆ ಧಕ್ಕೆಯಾಗುತ್ತಿದೆ ಎಂದು ಆರೋಪಿಸಿ ಬಹುಜನ ಪ್ರತಿಭಟನಾ ಸಮಾವೇಶವನ್ನು ಮೇ 27ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಭಾರತ ಮಾದಿಗ ದಂಡೋರ ಸಮಿತಿ ಸಂಸ್ಥಾಪಕ ರಾಜ್ಯಾಧ್ಯಕ್ಷರು ಬಿ. ಹುಸೇನಪ್ಪ ಸ್ವಾಮಿ ಮಾದಿಗ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಅಖಿಲ ಭಾರತ ಮಾದಿಗ ದಂಡೋರ ಸಮಿತಿ ವತಿಯಿಂದ ಸೋಮವಾರ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದರು.

ಮೀಸಲಾತಿ ತಿದ್ದುಪಡೆ ಮಾಡುವಲ್ಲಿ ಕಾಂಗ್ರೆಸ್ ಸರಕಾರ ಸಂವಿಧಾನ ಉಲ್ಲಂಘನೆ ಮಾಡಲಾಗಿದೆ. ಸಂವಿಧಾನವನ್ನು ಗಾಳಿಗೆ ತೂರಿ, ದಲಿತರಿಗೆ ಅನ್ಯಾಯ ಮಾಡಲಾಗುತ್ತಿದೆ. ದಲಿತ ಸಮಾಜ ಬೆಳೆಯಲು ಬಿಳದೆ ಕಾಂಗ್ರೆಸ್ ಪಕ್ಷ ನಮಗೆ ಅನ್ಯಾಯ ಮಾಡುತ್ತಿದೆ. ಅಹಂಕಾರದಿಂದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರಕಾರಕ್ಕೆ ತಕ್ಕ ಪಾಠ ಕಲಿಸಬೇಕಾಗಿದೆ. ಅದಕ್ಕಾಗಿಯೇ ಮೇ 27ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಮಾವೇಶವನ್ನು ನಡೆಸಲಾಗುವುದು. ಸಾಮಾಜಿಕ ನ್ಯಾಯ ಮತ್ತು ಸಮಾನತೆಗಾಗಿ ಹೋರಾಟ ನಡೆಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಕಳೆದ ಕೆಲ ವರ್ಷಗಳಿಂದ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ವಿಚಾರದಲ್ಲಿ ನಡೆಯುತ್ತಿರುವ ಚರ್ಚೆಗಳು ಹಾಗೂ ಸರ್ಕಾರದ ಕ್ರಮಗಳು ಸಮಾಜದಲ್ಲಿ ಅಸಮಾಧಾನ ಮೂಡಿಸಿವೆ.

ಸಮಾವೇಶದಲ್ಲಿ ವಿವಿಧ ಸಮಾಜಮುಖಿ ಸಂಘಟನೆಗಳ ಮುಖಂಡರು, ಹೋರಾಟಗಾರರು ಹಾಗೂ ಬುದ್ಧಿಜೀವಿಗಳು ಭಾಗವಹಿಸಲಿದ್ದಾರೆ.

ರಾಜ್ಯ ಸರ್ಕಾರವು ಜಾರಿಗೆ ತರಲು ಮುಂದಾಗಿರುವ ಒಳಮೀಸಲಾತಿ ನೀತಿ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದ್ದು, ಇದರಿಂದ ಪರಿಶಿಷ್ಟ ಜಾತಿಗಳ ಏಕತೆ ಹಾಳಾಗುವ ಸಾಧ್ಯತೆ ಇದೆ. ಅದನ್ನು




ವಿರೋಧಿಸಿ, ಮೇ 27ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ ನಡೆಯಲಿದ್ದು, ಜಿಲ್ಲೆಯ ಎಲ್ಲಾ ಭಾಗಗಳ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾಂಗ್ರೆಸ್ ಸರಕಾರಕ್ಕೆ ತಕ್ಕ ರೀತಿ ಪಾಠ ಕಲಿಸಬೇಕಾಗಿದೆ ಎಂದು ಹೇಳಿದರು.

ಅಖಿಲ ಭಾರತ ಮಾದಿಗ ದಂಡೋರ ಸಮಿತಿಯ ತಾಲೂಕು ಅಧ್ಯಕ್ಷ ಕನಕಪ್ಪ ದೊಡ್ಡಮನಿ, ಮುಖಂಡರಾದ ಯಮನೂರಪ್ಪ ಗೋನಾಳ, ಶರಣಪ್ಪ ಕನಕಗಿರಿ, ಯಂಕಪ್ಪ, ಬೋಜಪ್ಪ, ಶಿವಪ್ಪ ಮಾದಿಗ ಹಾಗೂ ಇತರಿದ್ದರು.

# ಕುಷ್ಟಗಿ ಪುರಸಭೆಯಿಂದ ಅರ್ಜಿ ಆಹ್ವಾನ

ಕೊಪ್ಪಳ: ಕುಷ್ಟಗಿ ಪುರಸಭೆಯ ಸನ್ 2026–27ನೇ ಸಾಲಿನ ಎಸ್.ಎಫ್.ಸಿ ಶೇ.7.25 ಹಾಗೂ ಶೇ.5ರ ವೈಯಕ್ತಿಕ ಕಾರ್ಯಕ್ರಮಕ್ಕೆ ಅನುದಾನ ಮಂಜುರಾಗಿದ್ದು, ಅದರಂತೆ ವೈಯಕ್ತಿಕ ಸೌಲಭ್ಯ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2026–27ನೇ ಸಾಲಿನ ಎಸ್.ಎಫ್.ಸಿ ಶೇ7.25 ಹಿಂದುಳಿದ ವರ್ಗದವರಿಗೆ ಸ್ವಂತ ಉದ್ಯೋಗಕ್ಕಾಗಿ ಬ್ಯಾಂಕಿನಿಂದ ಸಾಲ ಪಡೆದವರಿಗೆ ಸಹಾಯಧನ ಹಾಗೂ ಶೇ.5ರ ವಿಕಲಚೇತನರಿಗೆ ಶಸ್ತ್ರಚಿಕಿತ್ಸೆಗೆ ಸಹಾಯಧನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಈ ಅರ್ಜಿಗಳನ್ನು ಜೂನ್ 15ರೊಳಗಾಗಿ ಕುಷ್ಟಗಿ ಪುರಸಭೆ ಕಾರ್ಯಾಲಯಕ್ಕೆ ಸಲ್ಲಿಸಬೇಕು ಹಾಗೂ ಹೆಚ್ಚಿನ ಮಾಹಿತಿಗಾಗಿ ಕಚೇರಿಯ ವೇಳೆಯಲ್ಲೆ ಸಂಪರ್ಕಿಸಲು ಕುಷ್ಟಗಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೂತಾನ್‌ನಲ್ಲಿ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸಾಹಿತಿ ಡಾ.ಅರ್ಚನಾ ಅಥಣಿ ಭಾಗಿ



ಡಾ.ಅರ್ಚನಾ ಅಥಣಿ

**ಸಿದ್ದಯ್ಯ ಹಿರೇಮಠ**

**ಬೆಳಗಾವಿ ವಾರ್ತೆ ಮೋಳೆ;** ಸಾಹಿತ್ಯ ಎಲ್ಲರನ್ನು ಕೈ ಬೀಸಿ ಕರೆಯುತ್ತದೆ, ಅದರಲ್ಲಿ ಪಾಂಡಿತ್ಯ ಹೊಂದಿದವರನ್ನು ಮಾತ್ರ ಅಪ್ಪಿಕೊಳ್ಳುತ್ತದೆ ಎಂಬುದಕ್ಕೆ ಡಾ ಅರ್ಚನಾ ಅಥಣಿಯವರೇ ಸಾಕ್ಷಿ.

ರಡ್ಡೇರಹಟ್ಟಿ ಸರಕಾರಿ ಪ್ರೌಢ ಶಾಲೆಯ ಸಹ ಶಿಕ್ಷಕಿ ಖ್ಯಾತ ಸಾಹಿತಿ, ಬರಹಗಾರ್ತಿ ಹಾಗೂ ಕವಯತ್ರಿ ಡಾ. ಅರ್ಚನಾ ಅಥಣಿ ಅವರು ಭೂತಾನ್‌ನಲ್ಲಿ ನಡೆಯಲಿರುವ 54 ನೇ ಅಂತಾರಾಷ್ಟ್ರೀಯ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಮೇ 28 ರಂದು ಭೂತಾನ್ ದೇಶದ ರಾಜಧಾನಿ ಥಿಂಪುನ ಪೆಜೊಮ್ ಸಭಾಂಗಣದಲ್ಲಿ ಅಂತಾರಾಷ್ಟ್ರೀಯ ಸಾಂಸ್ಕೃತಿಕ ಉತ್ಸವ ವತಿಯಿಂದ ಹಮ್ಮಿಕೊಂಡಿರುವ 54ನೇ ಅಂತಾರಾಷ್ಟ್ರೀಯ ಸಾಂಸ್ಕೃತಿಕ ಫೆಸ್ಟ್ ಕಾರ್ಯಕ್ರಮದಲ್ಲಿ ಹಲವಾರು ದಿಗ್ಗಜರೊಂದಿಗೆ ಡಾ.ಅರ್ಚನಾ ಅಥಣಿ ಅವರು ಉದ್ಘಾಟನಾ ಸಮಾರಂಭದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ತಮ್ಮ ಪ್ರತಿಭೆಯನ್ನು ಅನಾವರಣ ಮಾಡಲಿದ್ದಾರೆ.

ಮೇ. 28ರಂದು ಭೂತಾನ್‌ನ ಪ್ರತಿಷ್ಠಿತ ಇಂಟರನ್ಯಾಷನಲ್ ಕಲ್ಚರಲ್ ಫೆಸ್ಟ್ ಕೌನ್ಸಿಲ್ ಇಂಡಿಯಾ ಹಾಗೂ ಫ್ರೆಂಡ್ಸ್ ಶಿಫ್ ಕ್ಲಬ್ ಭೂತಾನ ಇವರ ಸಂಯುಕ್ತ ಆಶ್ರಯದಲ್ಲಿ ಜರುಗಲಿರುವ ಕಾರ್ಯಕ್ರಮದಲ್ಲಿ ಭೂತಾನಿನ ಸಂಸತ್ ಸದಸ್ಯ ಎಚ್.ಇ. ದಶೋ ಉಗೇನ್ ಲಾಮಾ ಉದ್ಘಾಟಿಸಲಿದ್ದಾರೆ. ಭಾರದ ದೇಶದಿಂದ ಕರ್ನಾಟಕದ ಪ್ರತಿನಿಧಿಯಾಗಿ ಸಾಹಿತಿ ಡಾ.ಅರ್ಚನಾ ಅಥಣಿ ಸೇರಿದಂತೆ ಭಾರತದ ವಿವಿಧ ಭಾಗಗಳಿಂದ ಅನೇಕರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಸಾಹಿತಿ ಡಾ.ಅರ್ಚನಾ ಅಥಣಿಯವರು ಕನ್ನಡ ಸಾಹಿತ್ಯ ಸಂಸಕೃತಿ ಪ್ರಸಾರ ಮಾಡಲು ವಿದೇಶಗಳ ಕನ್ನಡ ಸಂಘಟನೆಗಳ ಜೊತೆಗೂಡಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಮಾಲ್ದೀವ್ಸ್, ದುಬೈ,ಒಮಾನ್, ಶ್ರೀಲಂಕಾ, ಇಂಡೋನೇಷ್ಯಾ, ಸಿಂಗಪೂರ, ಥೈಲ್ಯಾಂಡ್, ವಿಯೆಟ್ನಾಮ್, ಅಂಡಮಾನ್, ಲಕ್ಷದ್ವೀಪ ಸೇರಿದಂತೆ ಹಲವಾರು ದೇಶಗಳಲ್ಲಿ ಜರುಗಿರುವ ಅಂತಾರಾಷ್ಟ್ರೀಂ ಕನ್ನಡ ಸಂಸ್ಕೃತಿ ಉತ್ಸವಗಳಲ್ಲಿ ಪಾಲ್ಗೊಂಡು ಕನ್ನಡ ನಾಡು,ನುಡಿ, ಭಾಷೆ, ಸಂಸ್ಕೃತಿಯ ಪರಂಪರೆಯನ್ನುಉಳಿಸಿ ಬೆಳೆಸುವ ಕಾರ್ಯದಲ್ಲಿ ನಿರತರಾಗಿದ್ದಾರೆ. ಈ ಕಾರ್ಯಕ್ರಮದಲ್ಲಿ ನಾಡಿನ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರಿಗೆ ಪ್ರಶಸ್ತಿ ಪ್ರದಾನ, ಜರುಗಲಿದೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಹಮ್ಮಿಕೊಂಡಿದ್ದಾರೆ.

ಅಂತರಾಷ್ಟ್ರೀಯ ಸಮ್ಮೇಳನಗಳಲ್ಲಿ ಸಾಹಿತ್ಯ ಕ್ಷೇತ್ರವನ್ನು ಪ್ರತಿನಿಧಿಸಿದ್ದಾರೆ ಡಾ.ಅರ್ಚನಾ ಅಥಣಿ ಅವರು, ದೇಶ ವಿದೇಶಗಳಲ್ಲಿ ತಮ್ಮ ಅಭಿಮಾನಿ ಬಳಗವನ್ನು ಹೊಂದಿದ್ದಾರೆ. ಅಷ್ಟೇ ಅಲ್ಲದೇ, ತಮ್ಮ ಬರಹ, ಕವಿತೆಗಳ ಮೂಲಕ ಕನ್ನಡ ನಾಡಿನ ಮನೆಮಾತಾಗಿರುವುದು ಸಂತಸದ ಸಂಗತಿ.

ಅವರು ಬೆಳಗಾವಿ ಜಿಲ್ಲೆಯಿಂದ ಏಕೈಕ ಕವಿಯತ್ರಿಯಾಗಿ ಆಯ್ಕೆಯಾಗಿದ್ದು ಜಿಲ್ಲೆಯಲ್ಲಿ ಸಾಹಿತ್ಯಾಭಿಮಾನಿಗಳಲ್ಲಿ ಹರ್ಷವನ್ನುಂಟು ಮಾಡಿದೆ

**ಪರಿಚಯ;**

ಡಾ.ಅರ್ಚನಾ ಅಥಣಿಯ ವರು ಕರ್ನಾಟಕ ಹಾಗೂ ಮಹಾರಾಷ್ಟ್ರದ ಗಡಿ ಬೆಳಗಾವಿ ಜಿಲ್ಲೆಯವರಾಗಿದ್ದು ಗ್ರಾಮೀಣ ಭಾಗದಲ್ಲಿ ಶಿಕ್ಷಣ ಪಡೆದು ಪಿಎಚ್‌ಡಿ ಪದವಿ ಪಡೆದಿದ್ದಾರೆ. ಅವರು ತಮ್ಮ ಶಿಕ್ಷಕ ವೃತ್ತಿಯೊಂದಿಗೆ ಸಾಹಿತ್ಯ ಲೋಕದಲ್ಲಿ ಅಭಿರುಚಿ ಹೊಂದಿದವರಾ ಗಿದ್ದಾರೆ. ಅವರು ಹಲವಾರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯ ಲೋಕಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅವರು ರಚಿಸಿದ "ಅಕ್ಕಮಹಾದೇವಿಯ ವಚನಗಳ ಮೀಮಾಂಸೆ" ಸೇರಿದಂತೆ ಹಲವಾರು ಪುಸ್ತಕಗಳನ್ನು ಬರೆದು ಉತ್ತರ ಕರ್ನಾಟಕದಲ್ಲಿ ಮನೆ ಮಾತಾಗಿದ್ದಾರೆ.ಇಂಥ ಹಳ್ಳಿಯ ಪ್ರತಿಭೆ ಈಗ ವಿದೇಶದಲ್ಲಿ ಒಬ್ಬ ಕನ್ನಡದ ಸಾಹಿತಿ ಪ್ರತಿನಿಧಿಸುತ್ತಿರುವುದು ಕನ್ನಡಿಗರಿಗೆ ಹೆಮ್ಮೆಯ ವಿಷಯವೇ ಸರಿ.

# ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ರೈತರು, ದೇಶದ ಬೆನ್ನೆಲುಬಾಗಿದ್ದು ಕ್ಷೇತ್ರದಲ್ಲಿ ಅವರಿಗೆ ಎಲ್ಲ ರೀತಿಯ ಸೌಲಭ್ಯಗಳನ್ನು ಕಲ್ಪಿಸಿ: ರಮೇಶ ಜಾರಕಿಹೊಳಿ



ಗೋಕಾಕ: ರೈತ ಬಾಂಧವರಿಗೆ ಕೃಷಿ ಇಲಾಖೆಯಿಂದ ಸಹಾಯಧನದಡಿಯಲ್ಲಿ ವಿವಿಧ ಬೆಳೆಗಳ ಬಿತ್ತನೆ ಬೀಜಗಳನ್ನು ಶಾಸಕ ರಮೇಶ ಜಾರಕಿಹೊಳಿ ವಿತರಿಸಿದರು.

**ಬೆಳಗಾವಿ ವಾರ್ತೆ ಗೋಕಾಕ:** ರೈತರು ದೇಶದ ಬೆನ್ನೆಲುಬಾಗಿದ್ದು ಕ್ಷೇತ್ರದಲ್ಲಿ ಅವರಿಗೆ ಎಲ್ಲ ರೀತಿಯ ಸೌಲಭ್ಯಗಳನ್ನು ಕಲ್ಪಿಸಿ ಅವರ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವದಾಗಿ ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಅವರು, ಮಂಗಳವಾರದಂದು ನಗರದ ತಮ್ಮ ಕಾರ್ಯಾಲಯದ ಆವರಣದಲ್ಲಿ ರೈತ ಬಾಂಧವರಿಗೆ ಕೃಷಿ ಇಲಾಖೆಯಿಂದ ಸಹಾಯಧನದಡಿಯಲ್ಲಿ ವಿವಿಧ ಬೆಳೆಗಳ ಬಿತ್ತನೆ ಬೀಜಗಳನ್ನು ವಿತರಿಸಿ ಮಾತನಾಡುತ್ತಿದ್ದರು.

ರೈತರಿಗೆ ಅವಶ್ಯವಿರುವ ಸೋಯಾಬಿನ, ಗೋವಿನಜೋಳ, ಸೂರ್ಯಕಾಂತಿ, ಹೈಬ್ರೀಡ ಜೋಳ ಇತ್ಯಾದಿ ಬೆಳೆಗಳ ದಾಸ್ತಾನು ಸಾಕಷ್ಟಿದ್ದು ಅವುಗಳನ್ನು ರೈತ ಸಂಪರ್ಕ ಕೇಂದ್ರದಲ್ಲಿ ವಿತರಿಸಲಾಗುತ್ತಿದೆ. ರೈತರು ಕೃಷಿ ಇಲಾಖೆ ಅಧಿಕಾರಿಗಳ ಮಾರ್ಗದರ್ಶನದಲ್ಲಿ ತಮ್ಮ ಕೃಷಿಯಲ್ಲಿ ಆಧುನಿಕ ಪದ್ಧತಿಯನ್ನು ಅಳವಡಿಸಿಕೊಳ್ಳಿ ಕೃಷಿಯೊಂದಿಗೆ ಹೈನುಗಾರಿಕೆಯಂತಹ ಇತರ ಉಪಕಸಬುಗಳನ್ನು ಅಳವಡಿಸಿ ಕೊಂಡು ಆರ್ಥಿಕವಾಗಿ ಪ್ರಗತಿ ಸಾಧಿಸುವಂತೆ ಕರೆ ನೀಡಿದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಎಮ್ ಎಮ್ ನದಾಫ ಮಾತನಾಡಿ, ರೈತ ಬಾಂಧವರು ಆಧಾರ ಕಾರ್ಡ, ಜಮೀನುಗಳ ಪಹಣಿ ಪತ್ರಿಕೆ, ಬ್ಯಾಂಕ ಪಾಸ್ ಬುಕ್ ಝರಾಕ್ಸನೊಂದಿಗೆ ರೈತ ಸಂಪರ್ಕಕೇಂದ್ರಗಳಲ್ಲಿ ಸಹಾಯಧನದಡಿ ಬಿತ್ತನೆ ಬೀಜ ಪಡೆಯುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯರಾದ ಟಿ ಆರ್ ಕಾಗಲ, ಎಮ್ ಎಲ್ ತೋಳಿನವರ, ಶಾಸಕ ಕಚೇರಿಯ ಸಹಾಯಕರಾದ ಸುರೇಶ ನಸದಿ, ಕಾಂತು ಎತ್ತಿನಮನಿ, ಕೃಷಿ ಇಲಾಖೆ ಸಿಬ್ಬಂಧಿಗಳು ಸೇರಿದಂತೆ ಅನೇಕರು ಇದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತಾಲೂಕು ಘಟಕಕ್ಕೆ ನೂತನವಾಗಿ ಅವಿರೋಧ ಆಯ್ಕೆಗೊಂಡ ಕಾರ್ಯಕಾರಿ ಸಮಿತಿಯ ಸದಸ್ಯರು ಶಾಸಕ ರಮೇಶ ಜಾರಕಿಹೊಳಿ ಅವರನ್ನು ಮಂಗಳವಾರದಂದು ಅವರ ಕಾರ್ಯಾಲಯದಲ್ಲಿ ಸತ್ಕರಿಸಿದರು. ಜಿಲ್ಲಾ ಉಪಾಧ್ಯಕ್ಷ ಜಿ ಆರ್ ಸನದಿ, ತಾಲೂಕು ಅಧ್ಯಕ್ಷ ಪ್ರಕಾಶ ಮುರ್ಕಿಭಾಂವಿ, ಉಪಾಧ್ಯಕ್ಷ ಕೆ ಕೆ ಹೊಳಕರ ಹಾಗೂ ಎಸ ಆರ್ ಮಗದು, ಪ್ರಧಾನ ಕಾರ್ಯದರ್ಶಿ ವಿ ವಿ ನಾಯ್ಕರ, ಖಜಾಂಚಿ ಎಸ್ ಬಿ ಕೋಟುರ, ಸಹ ಕಾರ್ಯದರ್ಶಿ ಬಿ ಎಚ್ ಭಜಂತ್ರಿ, ಎಮ್ ಬಿ ಪಾಟೀಲ, ಈರಣ್ಣ ಡುಮ್ಮಗೋಳ, ಎಸ್ ಎಸ್ ನಂದಿಮಠ, ಎಮ್ ಬಿ ನಾಲಪರೋಶಿ, ಜೆ ಪಿ ದುರ್ಗನ್ನವರ, ಎಸ್ ಎಮ್ ಪಟೇಲ ಇದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ಸಮಾಜ ಕಲ್ಯಾಣ ಇಲಾಖೆಯಿಂದ ಗೋಕಾಕ ಹಾಗೂ ಮೂಡಲಗಿ ತಾಲೂಕಿನ 50 ಅಲೆಮಾರಿ ಜನಾಂಗದ ಕುಟುಂಬದವರಿಗೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಮಂಜೂರದ ಟಾರಪಾಲ್(ತಾಡಪತ್ರಿ)ಗಳನ್ನು ಶಾಸಕ ರಮೇಶ ಜಾರಕಿಹೊಳಿ ಅವರು ಮಂಗಳವಾರದಂದು ತಮ್ಮ ಕಾರ್ಯಾಲಯದಲ್ಲಿ ವಿತರಿಸಿದರು. ತಾಪಂ ಇಓ ಪರಶುರಾಮ ಘಸ್ತೆ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಅಶೋಕ ಮಲಬನ್ನವರ, ಕಚೇರಿ ಅಧೀಕ್ಷಕ ಎಮ್ ಎಸ್ ಪಾಟೀಲ, ಅಲೆಮಾರಿ ಸಮಾಜ ಮುಖಂಡರಾದ ಈರಣ್ಣ ಸಂಗಮನವರ, ಸ್ವಾಮಿ ಕೋಮಾರಿ, ರಾಜು ಮದ್ದೆನ್ನವರ, ಈರಪ್ಪ ಹೊಲದವರ, ಆನಂದ ಪತ್ತಾಗಿನಿ ಹಾಗೂ ಇಲಾಖೆ ಸಿಬ್ಬಂಧಿ ಇದ್ದರು.

# ನಾಗನೂರ ಪಟ್ಟಣದ ಅಭಿವೃದ್ಧಿಗೆ ಸರಕಾರದಿಂದ ಅನುದಾನವನ್ನು ನಿರೀಕ್ಷಿಸಲಾಗುತ್ತಿದೆ : ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ



**ಬೆಳಗಾವಿ ವಾರ್ತೆ ಮೂಡಲಗಿ:** ನಾಗನೂರ ಪಟ್ಟಣದ ಅಭಿವೃದ್ಧಿಗೆ ಸರಕಾರದಿಂದ ಅನುದಾನವನ್ನು ನಿರೀಕ್ಷಿಸಲಾಗುತ್ತಿದೆ ಎಂದು ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಹೇಳಿದರು.

ತಾಲ್ಲೂಕಿನ ನಾಗನೂರ ಪಟ್ಟಣದ ಬಸ್ ನಿಲ್ದಾಣದ ಬಳಿ ಪಟ್ಟಣ ಪಂಚಾಯತ ಸಹಯೋಗದಲ್ಲಿ ನಿರ್ಮಿಸಲಾಗಿರುವ ಇಂದಿರಾ ಕ್ಯಾಂಟಿನ್ ಉದ್ಘಾಟಿಸಿ ಮಾತನಾಡಿದರು.

ಪಟ್ಟಣದ ಅಭಿವೃದ್ಧಿಗೆ ಸದಾ ಬದ್ಧತೆಯಿಂದ ಕಾರ್ಯ ನಿರ್ವಹಿಸಲಾಗುತ್ತದೆ. ಈ ಮೊದಲು ಗ್ರಾಮ ಪಂಚಾಯತಿಯಿದ್ದಾಗ ಸರ್ಕಾರದ ಅನುದಾನದಡಿ ಸಾಕಷ್ಟು ಪ್ರಮಾಣದಲ್ಲಿ ಅಭಿವೃದ್ಧಿಯನ್ನು ಮಾಡಲಾಗಿದೆ. ಆದರೆ, ಗ್ರಾಮ

ಪಂಚಾಯತಿಯಿಂದ ಪಟ್ಟಣ ಪಂಚಾಯತಿಗೆ ಮೇಲ್ದರ್ಜೆಗೆ ಏರಿಸಿದ್ದರಿಂದ ಪಂಚ ಗ್ಯಾರಂಟಿ ಯೋಜನೆಗಳಿಂದ ಅನುದಾನವು ಸಮರ್ಪಕವಾಗಿ ಬಿಡುಗಡೆಯಾಗುತ್ತಿಲ್ಲ ವೆಂದು ಹೇಳಿದರು.

ಬಡವರಿಗಾಗಿ ಅತಿ ಕಡಿಮೆ ದರದಲ್ಲಿ ಊಟ ಮತ್ತು ಉಪಹಾರ ದೊರೆಯಲಿದೆ. ಗುಣಮಟ್ಟದ ಆಹಾರ ಸಿಗಲಿದೆ. ಇದನ್ನು ನಾಗರಿಕರು ಸದ್ಬಳಕೆಯನ್ನು ಮಾಡಿಕೊಳ್ಳುವಂತೆ ಅವರು ಕೋರಿದರು.

ಮಾಜಿ ಸಚಿವ ಆರ್.ಎಂ. ಪಾಟೀಲ, ಹಿರಿಯ ಸಹಕಾರಿ ಮುಖಂಡ ಬಿ.ಆರ್.ಪಾಟೀಲ, ಪ್ರಭಾ ಶುಗರ್ಸ ನಿರ್ದೇಶಕ ಕೆ.ಎಸ್.ಪಾಟೀಲ, ಗಜಾನನ ಯರಗಣವಿ, ಬಿಜೆಪಿ ಮಂಡಲ ಪ್ರಕಾರ್ಯದರ್ಶಿ ಪಿ.ಎಲ್.ಬಬಲಿ, ಸುಭಾಸ ಕ್ಯಾತೆನ್ನವರ, ಮುತ್ತೆಪ್ಪ ಮುತ್ತೆನ್ನವರ, ರಮೇಶ ಬೆಳಕೂಡ, ಬಸು ಹಳಿಗೌಡರ, ಶಂಕರ ದಳವಾಯಿ, ಬಸವರಾಜ ಪಾಟೀಲ, ಮಹಾದೇವ ನಾಯಿಕ, ವಾಯ್.ಆರ್. ಕರಬನ್ನವರ, ಬಸವಂತ ಪಡದಲ್ಲಿ, ಅಜ್ಜಪ್ಪ ಗೋಟೂರ, ಲಗಮಣ್ಣ ಗಡ್ಡಿ, ಮಹಾದೇವ ಮಾಯನ್ನವರ, ಬಲವಂತ ಕರಬನ್ನವರ, ಚಂದ್ರಶೇಖರ ಪಡದಲ್ಲಿ, ಪ್ರೊ. ಬಿ.ಬಿ.ತಿಗಡಿ, ಪಪಂ ಮುಖ್ಯಾಧಿಕಾರಿ ಬಾಳನಾಯಿಕ ಕುಮರೇಶಿ, ಪಪಂ ಸದಸ್ಯರು, ಅನೇಕರು ಉಪಸ್ಥಿತರಿದ್ದರು.

# ಸಮಾರೋಪ ಸಮಾರಂಭ




**ಬೆಳಗಾವಿ ವಾರ್ತೆ ಧಾರವಾಡ:** ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆಯ ಧಾರವಾಡ ಕ್ರಿಕೇಟ್ ಅಕಾಡೆಮಿ ವತಿಯಿಂದ ಹುರುಕಡ್ಲಿಅಜ್ಜ ಕಾನೂನು ಮಹಾವಿದ್ಯಾಲಯದ ಮೈದಾನದಲ್ಲಿಬೇಸಿಗೆ ಶಿಬಿರದ ಸಮಾರೋಪ ಸಮಾರಂಭವನ್ನು ಏರ್ಪಡಿಸಲಾಗಿತ್ತು.

ಅಧ್ಯಕ್ಷರಾಗಿ ಸಂಸ್ಥೆಯ ಕಾರ್ಯಾಧ್ಯಕ್ಷ ರಾಜಶೇಖರ. ಯು. ಬೆಳ್ಳಕ್ಕಿ ಆಗಮಿಸಿದ್ದರು. ಗೌರವ ಅತಿಥಿಗಳಾಗಿ ಜಂಟಿ ಕಾರ್ಯದರ್ಶಿ .ಶಿವಪುತ್ರ.ಎಂ. ಅಗಡಿ, ಧಾರವಾಡ ಜಿಲ್ಲಾ ಓಲಂಪಿಕ್ ಅಸೋಸಿ ಏಷನ್ ಸದಸ್ಯ ಬಿ.ಎಸ್. ತಾಳಿಕೋಟಿ, ಕಚೇರಿ ಅಧೀಕ್ಷಕರಾದ ಶಿವಲಿಂಗ ನೀಲಗುಂದ ಪಾಲ್ಗೊಂಡಿದ್ದರು. ಇದೇ ಸಂಧರ್ಭದಲ್ಲಿ ಧಾರವಾಡ ಜೋನ್ ಅಂಡರ್ 15 ಕ್ರಿಕೇಟ್ ತಂಡಕ್ಕೆ ಈ ಅಕಾಡೆಮಿಯಿಂದ ಆಯ್ಕೆಯಾದ ಕುಮಾರಿ ವರ್ಷಾ ಕರೀಕಟ್ಟಿ, ಪ್ರಿಯಾಂಕಾ ಆನಾಡ, ಸೃಷ್ಠಿ ಕಣ್ಣನ್ನವ ರ್ಮತ್ತು ಅಂಡರ್ 19 ಕ್ರಿಕೆಟ್ ತಂಡಕ್ಕೆ ಆಯ್ಕೆಯಾದ ಕುಮಾರಿ ರೂಹಿ ದೊಡ್ಡಮನಿ, ಕುಮಾರಿ ಆರಾಧನಾ ಹೆಬ್ಬಿಕರ್, ಕುಮಾರಿ ತ್ರಿವೇಣಿ ಗುಲಗಂಜಿ ಇವರನ್ನು ಕ್ರಿಕೆಟ್ ಅಕಾಡೆಮಿ ವತಿಯಿಂದ ಸನ್ಮಾನಿಸಲಾಯಿತು. ಧಾರವಾಡ ಕ್ರಿಕೆಟ್ ಅಕಾಡೆಮಿಯವರು ಅಧ್ಯಕ್ಷರು ಹಾಗೂ ಮುಖ್ಯ ಅತಿಥಿಗಳನ್ನು ಸಹ ಇದೇ ಸಂದರ್ಭದಲ್ಲಿ ಸನ್ಮಾನಿಸಿದರು. ರಾಜಶೇಖರ ಬೆಳ್ಳಕ್ಕಿ ಇವರು ಮಾತನಾಡುತ್ತ ಇಂದಿವನ ದಿನಗಳಲ್ಲಿ ಪಾಲಕರು ತಮ್ಮ ಮಕ್ಕಳ ಮೇಲೆ ನಿಗಾ ಇಡಬೇಕು ಎಂದರು.

ಅತಿಥಿಗಳಾದ ಬಿ.ಎಸ್.ತಾಳಿಕೋಟಿ ಮಾತನಾಡಿ ಇಂದಿನ ಮಕ್ಕಳು ಅತೀಯಾಗಿ ಮೊಬೈಲ್ ಮೋರೆಹೋಗಿರುವುದರಿಂದ ಅವರ ನರಗಳ ಮೇಲೆ ದುಷ್ಪರಿಣಾಮ ಬೀರುತ್ತಿವೆ ಆದಷ್ಟು ಮಕ್ಕಳನ್ನು ಮೊಬೈಲ್‌ಗಳಿಂದ ದೂರ ವಿಡುವಂತೆ ತಿಳಿ ಹೇಳಿದರು. ಶಿವಲಿಂಗ ನೀಲಗುಂದ ಜ್ಯೋತಿಸ ಸಾಲಟ್ಟಿ ಕೊಣ್ಣುರ, ಮಹಾಂತೇಶ ಕ್ವಾಟಿ, ಸೋಮಶೇಖರ ಕರಡಿಗುಡ್ಡ ಸೇರಿದಂತೆ ಶಿಬಿರಾರ್ಥಿಗಳು ಹಾಗೂ ಅವರಪಾಲಕರು ಪಾಲ್ಗೊಂಡಿದ್ದರು.

# ಗುರುಗಳು ಜ್ಞಾನದ ಸಂಜೀವಿನಿ ನೀಡುವ ಶಕ್ತಿಯಾಗಿದ್ದಾರೆ



**ಬೆಳಗಾವಿ ವಾರ್ತೆ ಅಥಣಿ:** ಗುರು ಎಂದರೆ ಬೆಳಕು, ಜ್ಞಾನ, ತೇಜಸ್ಸು,ಅದಕ್ಕೆ ಗುರುಗಳನ್ನು ಜ್ಞಾನಸೂರ್ಯ ಎನ್ನುತ್ತಾರೆ. ಸೂರ್ಯ ಬಂದ ಕೂಡಲೆ ಕತ್ತಲೆ ಸಹಜವಾಗಿ ಕರಗುವಂತೆ ಗುರುವಿನ ಜ್ಞಾನದ ಅನುಗ್ರಹ ಆದ ಕೂಡಲೇ ಅಜ್ಞಾನ ತಾನಾಗಿಯೇ ನಿವಾರಣೆಯಾಗಿ ಸುಜ್ಞಾನ ಫಲಿಸುತ್ತದೆ, ಗುರುಗಳು ಜ್ಞಾನದ ಸಂಜೀವಿನಿ ನೀಡುವ ಶಕ್ತಿಯಾಗಿದ್ದಾರೆ ಎಂದು ವಿದ್ಯಾವರ್ದಕ ಸಂಸ್ಥೆಯ ಅದ್ಯಕ್ಷರಾದ ಶಿವಶಂಕರ ಹಂಜಿ ಹೇಳಿದರು.

ಪಟ್ಟಣದ ಭಾನುವಾರ ವಿದ್ಯಾವರ್ಧಕ ಸಂಸ್ಥೆಯ ಆವರಣದಲ್ಲಿ 2006–07 ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಂದ ಗುರುವಂದನ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಎಲ್ಲರನ್ನು ಸಮದ್ಧಷ್ಟಿಯಿಂದ ನೋಡುತ್ತಾ ಜ್ಞಾನದ ಧಾರೆಯನ್ನು ಹರಿಸುವ ಗುರುಗಳನ್ನು ಗೌರವಿಸುವದು ನಿಜಕ್ಕೂ ಒಂದು ಸತ್ಕಾರ್ಯವೇ ಸರಿ ಹಾಗೂ ಅವರನ್ನು ಆಧರಿಸುವ ಭವ್ಯ ಪರಂಪರೆ ನಮ್ಮದು. ಇದು ಶಿಷ್ಯರ ಗುರುಗಳ ಅಪೂರ್ವ ಸಂಗಮ ಇಲ್ಲಿ ಬಾಲ್ಯದ ನೆನಪುಗಳನ್ನು ಮೆಲುಕು ಹಾಕುವ ಕಾರ್ಯಕ್ರಮವಾಗಿದೆ , ಈ ಸಂಸ್ಥೆಯು ಸಾಕಷ್ಟು ಜನರಿಗೆ ಆಶಾಕಿರಣವಾಗಿ ವಿದ್ಯಾರ್ಥಿಗಳ ಬಾಳಿಗೆ ಬೆಳಕಾಗಿದೆ, ಅದೆ ತರಹ ಶಿಕ್ಷಕರ ಸೇವೆಗೆ ಗೌರವ ನೀಡುವ ಕೆಲಸವನ್ನ ಮಾಡುತ್ತಾ ಬಂದಿದ್ದೇವೆ ಎಂದು ಹೇಳಿದರು .

ಈ ವೇಳೆ ಶಿಕ್ಷಕ ಶಿಕ್ಷಕರಾದ ಎಸ್.ಬಿ. ಜೋರಾಪುರ, ಬಂಡು ಕೋಳಿ,ಸಿದ್ದು ಹುಲ್ಲೆನ್ನವರ,ಕೆ. ಎಮ.ಖೋದಾನಪೂರ ಹಳೆ ವಿದ್ಯಾರ್ಥಿಗಳನ್ನ ಉದ್ದೇಶಿಸಿ ಮಾತನಾಡಿ ದರು .ಶಾಲೆಯ ಮುಖ್ಯ ದ್ವಾರದಿಂದ ವೇದಿಕೆಯವರೆಗೂ ಆಡಳಿತ ಮಂಡಳಿಯ ಸದಸ್ಯರು ಹಾಗೂ ಶಿಕ್ಷಕರನ್ನ ಪುಷ್ಪ ಮಳೆಗೈದು ಸ್ವಾಗತಿಸಿದರು , ಕಾರ್ಯಕ್ರಮ ದ ನಂತರ ಹಳೆಯ ನೆನಪುಗಳನ್ನ ಕೆದಕಲು ಕೆಲ ನಿಮಿಷಗಳ ಕಾಲ ತರಗತಿ ನಡೆಸಿ ಹಳೆಯ ದಿನಗಳನ್ನ ನೆನದು ಭಾವುಕರಾದರು .

ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆಯನ್ನ ಮುಖ್ಯೋ ಪಾಧ್ಯಾಯರಾದ ಮಲ್ಲನಗೌಡಾ ದೇಸಾಯಿ ವಹಿಸಿದರು ಹಾಗೂ ಶೆಟ್ಟರ ಮಠದ ಮರಳುಸಿದ್ದ ಮಹಾಸ್ವಾಮಿಜಿಯವರು ಕಾರ್ಯಕ್ರಮ ದಿವ್ಯ ಸಾನಿದ್ಯ ವಹಿಸಿದರು . ಈ ವೇಳೆ ಸಂಸ್ಥೆಯ ಉಪಾದ್ಯಕ್ಷರಾದ ಪ್ರಕಾಶ ಮಹಾಜನ್, ಸದಸ್ಯರಾದ ಶ್ರೀಶೈಲ ಸಂಕ,ಸುನೀಲ ಶಿವಣಗಿ,ವಿಜಯ ಬುರ್ಲಿ,ಅಶೋಕ ಬುರ್ಲಿ,ಶಿಕ್ಷಕರಾದ ಪ್ರಕಾಶ ಚನ್ನಗೌಡರ, ಮಹಾಂತೇಶ ಬುರ್ಲಿ,ಕುಮಾರ ಹುಲ್ಲೆನ್ನವರ, ನರಸಗೌಡಾ ಗಸ್ತಿ,ಮಹಾದೇವ ಪಾಟೀಲ, 2006 –2007 ಸಾಲೀನ ವಿದ್ಯಾರ್ಥಿಗಳು ಉಪಸ್ಥಿತಿ ಇದ್ದರು ,ಮೃತ್ಯುಂಜಯ ಬರ್ಲಿ ಹಾಗೂ ಗೀತಾ ಮೂದೋಳ ನಿರೂಪಿಸಿದರು ,ಸಂತೋಷ ನಾಯಿಕ ವಂದಿಸಿದರು.

# ಸೋಯಾಬಿನ್ ಬಿತ್ತನೆಗೆ ಹೆಚ್ಚಿನ ತೇವಾಂಶ ಮತ್ತು ಸೂಕ್ಷ್ಮ ಬಿತ್ತನೆ ಅಗತ್ಯ

**ಬೆಳಗಾವಿ ವಾರ್ತೆ ಧಾರವಾಡ:** ಸೂಕ್ಷ್ಮ ಜಲಾನಯನ ಮಟ್ಟದ ಹವಾಮಾನ ಆಧಾರಿತ ಕೃಷಿ ಸಲಹಾ ಸೇವೆಗಳ ಯೋಜನೆ ಮತ್ತು ಧಾರವಾಡ ಕೃಷಿ ವಿಶ್ವ ವಿದ್ಯಾಲಯ ಇವರು ತಿಳಿಸಿರುವಂತೆ ಮುಂಗಾರು ಪೂರ್ವ ಉತ್ತಮ ಮಳೆಯಾದ ಕಡೆಗಳಲ್ಲಿ ಮುಂಗಾರಿ ಬಿತ್ತನೆಗೆ ಭೂಮಿಯನ್ನು ತಯಾರಿಸಿಕೊಂಡು ನಂತರ ಉತ್ತಮ ಮಣ್ಣಿನ ತೇವಾಂಶ ನೋಡಿಕೊಂಡು ಮುಂಗಾರಿ ಬೆಳೆಗಳ ಬಿತ್ತನೆಯನ್ನು ಕೈಗೊಳ್ಳಬೇಕು.

ಪ್ರಮುಖವಾಗಿ ಸೋಯಾಬಿನ್ ಬೆಳೆಯು ಅತ್ಯಂತ ಸೂಕ್ಷ್ಮವಾದ ಬೀಜ ಕವಚವನ್ನು ಹೊಂದಿದ್ದು. ರೈತರು ಸೂಕ್ಷ್ಮವಾಗಿ ನಿರ್ವಹಿಸಬೇಕು ಹಾಗೂ ಮಣ್ಣಿನಲ್ಲಿ ತೇವಾಂಶ ಇದ್ದರೆ ಮಾತ್ರ ಬಿತ್ತನೆ ಕೈಗೊಳ್ಳಬೇಕು. ಒಂದು ವೇಳೆ ಸೋಯಾಬಿನ್ ಬೆಳೆಯನ್ನು ಬಿತ್ತುವ ಮುಂಚೆ ಬೀಜಗಳನ್ನು ಒರಟಾಗಿ ನಿರ್ವಹಿಸಿದ್ದಲ್ಲಿ ಅಥವಾ ಕಡಿಮೆ ತೇವಾಂಶವಿರುವ ಮಣ್ಣಿನಲ್ಲಿ ಬಿತ್ತನೆ ಕೈಗೊಂಡರೆ ಮೊಳಕೆ ಪ್ರಮಾಣ ಖಂಡಿತವಾಗಿ ಕಡಿಮೆಯಾಗುತ್ತದೆ. ಆದ್ದರಿಂದ ಸಾಕಷ್ಟು ತೇವಾಂಶವಿರುವ ಮಣ್ಣಿನಲ್ಲಿ ಅತೀ ಸೂಕ್ಷ್ಮವಾಗಿ ಬಿತ್ತನೆ ಕಾರ್ಯವನ್ನು ಕೈಗೊಳ್ಳಬೇಕೆಂದು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001